ಸಂಪುಟ: 11 ಸಂಚಿಕೆ: 144 ಪುಟ: 4+2 ಬೆಲೆ : 3.00 ಶುಕ್ರವಾರ ಜುಲೈ 10, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 144 Pages : 4+2 Rate : 3.00 Friday July 10, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಒಪಿಎಸ್ ಸಹಿತ ಹಲವು ಬೇಡಿಕೆಗಳ ಮನವಿ; ಜಿಲ್ಲೆಯಿಂದ ಸಾವಿರಕ್ಕೂ ಹೆಚ್ಚು ನೌಕರರ ಭಾಗಿ: ಬಸವರಾಜ ಬಳ್ಳಾರಿ

# ಜು.11ಕ್ಕೆ ನಮ್ಮಭಿಮಾನ ಸಮಾರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರಿಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಜುಲೈ 11ರಂದು ಬೆಂಗಳೂರಿನ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ನಮ್ಮಭಿಮಾನ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದ್ದು, ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 25 ಸಾವಿರಕ್ಕೂ ಹೆಚ್ಚು ಸರ್ಕಾರಿ ನೌಕರರು ಭಾಗವಹಿಸಲಿದ್ದಾರೆ ಎಂದು ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ಜಿಲ್ಲೆಯಿಂದ ಸಾವಿರಕ್ಕೂ ಹೆಚ್ಚು ನೌಕರರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಜಿಲ್ಲೆಯ ಎಲ್ಲ ತಾಲೂಕುಗಳಿಂದ ಸುಮಾರು 12 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಇನ್ನೂ ಹಲವರು ಖಾಸಗಿ ವಾಹನ ಹಾಗೂ ರೈಲಿನ ಮೂಲಕ ಕಾರ್ಯಕ್ರಮಕ್ಕೆ ಬರಲಿದ್ದಾರೆ ಎಂದು ಹೇಳಿದರು.




ಅಭಿನಂದನಾ ಸಮಾರಂಭದಲ್ಲಿ ಎನ್‌ಪಿಎಸ್ ರದ್ದುಪಡಿಸಿ ಹಳೆ ಪಿಂಚಣಿ ಯೋಜನೆ (ಒಪಿಎಸ್) ಮರುಜಾರಿ, 8ನೇ ವೇತನ ಆಯೋಗದ ಶಿಫಾರಸುಗಳ ಜಾರಿ, ಕೇಂದ್ರ ಸರ್ಕಾರಿ ನೌಕರರಿಗೆ ದೊರೆಯುವ ವೇತನ ಹಾಗೂ ಭತ್ಯೆಗಳನ್ನು ರಾಜ್ಯ ಸರ್ಕಾರಿ ನೌಕರರಿಗೂ ವಿಸ್ತರಿಸುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಒಳಗೊಂಡ ಮನವಿಪತ್ರವನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿ ಹಾಗೂ ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಲಿದ್ದು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿರುವ ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ರಾಜ್ಯದ ಸುಮಾರು 10 ಜಿಲ್ಲೆಗಳ 3 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಸಮಾರಂಭದಲ್ಲಿ ಸನ್ಮಾನಕ್ಕೆ ಪಾತ್ರರಾಗಲಿದ್ದು, ರಾಜ್ಯಾದ್ಯಂತ 11 ಸಾವಿರ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಆಯ್ಕೆಯಾಗಿದ್ದಾರೆ. ಗದಗ ಜಿಲ್ಲೆಯಿಂದ 148 ವಿದ್ಯಾರ್ಥಿಗಳಿಗೆ ತಲಾ ₹2 ಸಾವಿರ ನಗದು ಬಹುಮಾನ ನೀಡಿ ಗೌರವಿಸಲಾಗುವುದು ಎಂದು ಮಾಹಿತಿ ನೀಡಿದರು.

ರಾಜ್ಯದ ವಿವಿಧ ಇಲಾಖೆಗಳ ಸಾವಿರಾರು ನೌಕರರು, ಪದಾಧಿಕಾರಿಗಳು ಹಾಗೂ ಕುಟುಂಬಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ನೌಕರರ ಪ್ರಮುಖ ಬೇಡಿಕೆಗಳ ಈಡೇರಿಕೆಗೆ ಸರ್ಕಾರದ ಗಮನ ಸೆಳೆಯುವ ಪ್ರಯತ್ನ ಮಾಡಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಡಿ.ಎಸ್. ತಳವಾರ, ಎಂ.ಎಂ. ನಿಟ್ಟಾಲಿ, ಸಿದ್ದಪ್ಪ ಲಿಂಗದಾಳ, ರಾಜು ಕಂಟಿಗೊನ್ನನವರ, ಮುತ್ತು ಮಲಕಶೆಟ್ಟಿ, ಸಂಜೀವಕುಮಾರ ಕುಂದಗೋಳ, ಶರಣು ಸಂಗದಾಳ ಹಾಗೂ ಐ.ಎ. ಗಾಡಗೋಳಿ ಉಪಸ್ಥಿತರಿದ್ದರು.

> **ಎಸ್‌ಐಆರ್ ಸಮೀಕ್ಷಾ ಕಾರ್ಯದಲ್ಲಿ ತೊಡಗಿರುವ ಸಿಬ್ಬಂದಿಯ ಮೇಲೆ ಅನಗತ್ಯ ಒತ್ತಡ ಬೀಳದಂತೆ ಸರ್ಕಾರ ಹಾಗೂ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು. ವಾಸ್ತವಿಕ ಪರಿಸ್ಥಿತಿಗೆ ಅನುಗುಣವಾಗಿ ಕಾರ್ಯದಿನಗಳನ್ನು ನಿಗದಿಪಡಿಸಬೇಕು. ಕರ್ತವ್ಯಕ್ಕೆ ಅಡ್ಡಿಪಡಿಸುವ ಯಾವುದೇ ವ್ಯಕ್ತಿ ಅಥವಾ ಸಂಘಟನೆಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು.**
>
> **- ಡಾ. ಬಸವರಾಜ ಬಳ್ಳಾರಿ,** ರಾಜ್ಯ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ಗದಗ ಜಿಲ್ಲಾಧ್ಯಕ್ಷರು

---

### ರಾಮಗೇರಿಯಲ್ಲಿ ಹಳೆಯ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರ

## 37 ವರ್ಷಗಳ ಬಳಿಕ ಒಂದಾದ ಗೆಳೆಯರು..!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರಾಥಮಿಕ ಹಾಗೂ ಪ್ರೌಢಶಾಲೆ ಹಂತದಲ್ಲಿ ಬೆಸೆಯುವ ಸ್ನೇಹ ಜೀವನದ ಅತ್ಯಂತ ಅಮೂಲ್ಯ ಬಾಂಧವ್ಯವಾಗಿದ್ದು, ವರ್ಷಗಳು ಕಳೆದರೂ ಆ ಗೆಳೆತನದ ನೆನಪು ಎಂದಿಗೂ ಮಾಸುವುದಿಲ್ಲ ಎಂದು ಲಕ್ಷ್ಮೇಶ್ವರ ಎಪಿಎಂಸಿ ಮಾಜಿ ಅಧ್ಯಕ್ಷ ಬಸಣ್ಣ ಬೆಟಗೇರಿ ಹೇಳಿದರು.

ತಾಲೂಕಿನ ರಾಮಗೇರಿ ಗ್ರಾಮದಲ್ಲಿ ಪುರಸಭೆ ಉಮಾ ವಿದ್ಯಾಲಯದ 1987-88ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಳೆಯ ವಿದ್ಯಾರ್ಥಿಗಳ ಗೆಳೆಯರ ಬಳಗ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಲವು ವರ್ಷಗಳ ಬಳಿಕ ಒಂದೇ ವೇದಿಕೆಯಲ್ಲಿ ಸೇರಿರುವ ಹಳೆಯ ವಿದ್ಯಾರ್ಥಿಗಳು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವುದು ಸಂತಸದ ಸಂಗತಿ. ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಮೂಲಕ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುತ್ತಿರುವುದು ಇತರ ಸಂಘಟನೆಗಳಿಗೂ ಮಾದರಿಯಾಗಿದೆ. ಹಳೆಯ ವಿದ್ಯಾರ್ಥಿಗಳ ಸಂಘಗಳು ಕೇವಲ ಸ್ನೇಹಮಿಲನಕ್ಕೆ ಸೀಮಿತವಾಗದೆ ಶಿಕ್ಷಣ, ಆರೋಗ್ಯ, ಪರಿಸರ ಹಾಗೂ ಸಾಮಾಜಿಕ ಸೇವಾ ಕಾರ್ಯಗಳಲ್ಲಿ ತೊಡಗಿಕೊಳ್ಳಬೇಕು ಎಂದು ಕರೆ ನೀಡಿದರು.

ಸಂಘಟಿತ ಪ್ರಯತ್ನದಿಂದ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಸಾಧ್ಯ. ವಿದ್ಯಾರ್ಥಿಗಳ ಸಾಧನೆಯನ್ನು ಗೌರವಿಸುವುದು ಅವರಲ್ಲಿ ಮತ್ತಷ್ಟು ಸಾಧನೆ ಮಾಡುವ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ರಾಹುಲ್ ಬಸಣ್ಣ ಹೊಳಲಾಪುರ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶಿವಣ್ಣ ಬೆಟಗೇರಿ, ಸುರೇಶ ಜಗ್ಗಲ, ಶೇಖಣ್ಣ ಕಾಳೆ, ಗೆಳೆಯರ ಬಳಗದ ಅಧ್ಯಕ್ಷ ಬೀರಪ್ಪ ಕಾಳೆ, ಉಪಾಧ್ಯಕ್ಷ ಮಹಾಂತೇಶ ಪಡಿಗೇರಿ ಸೇರಿದಂತೆ ಬಳಗದ ಸದಸ್ಯರು, ಹಿರಿಯರು, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> **ಹಳೆಯ ವಿದ್ಯಾರ್ಥಿಗಳ ಸಂಘಗಳು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿದರೆ ಮುಂದಿನ ಪೀಳಿಗೆಗೆ ಉತ್ತಮ ಮಾರ್ಗದರ್ಶನ ನೀಡಲು ಸಾಧ್ಯ.**
>
> **- ಬಸಣ್ಣ ಬೆಟಗೇರಿ**

---

### ಬೆಳೆವಿಮೆ, ಮೇವಿನ ಬ್ಯಾಂಕ್, ಸಾಲಮನ್ನಾಕ್ಕೆ ರೈತ ಸಂಘದ ಆಗ್ರಹ

## ಗದಗ ಜಿಲ್ಲೆ ಬರಪೀಡಿತ ಎಂದು ಘೋಷಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮಳೆಯ ಕೊರತೆಯಿಂದ ಗದಗ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಜಿಲ್ಲೆಯನ್ನು 2026-27ನೇ ಸಾಲಿನ ಬರಪೀಡಿತ ಪ್ರದೇಶ ಎಂದು ಘೋಷಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗದಗ ಜಿಲ್ಲಾ ಘಟಕವು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮನವಿ ಸಲ್ಲಿಸಿದೆ.

ಜಿಲ್ಲಾಧ್ಯಕ್ಷ ಶಂಕರಗೌಡ ಮ. ಜಯನಗೌಡ್ರ ಅವರ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ಜಿಲ್ಲೆಯಾದ್ಯಂತ ಸಮರ್ಪಕ ಮಳೆಯಾಗದ ಕಾರಣ ರೈತರು ಬಿತ್ತಿದ ಬೆಳೆಗಳು ಒಣಗುತ್ತಿವೆ. ಜಾನುವಾರುಗಳಿಗೆ ಮೇವು ಹಾಗೂ ಹೊಟ್ಟು ಸಿಗದ ಪರಿಸ್ಥಿತಿ ನಿರ್ಮಾಣವಾಗಿದ್ದು, ಪ್ರತಿ ಹೋಬಳಿ ಮಟ್ಟದಲ್ಲಿ ಗೋಶಾಲೆ ತೆರೆಯಬೇಕು ಹಾಗೂ ಮೇವಿನ ಬ್ಯಾಂಕ್‌ಗಳನ್ನು ಆರಂಭಿಸಬೇಕು ಎಂದು ಒತ್ತಾಯಿಸಿದರು.

ಬರಗಾಲದಿಂದ ರೈತರು ಗುಳೆ ಹೋಗುವಂತಹ ಪರಿಸ್ಥಿತಿ ಎದುರಿಸುತ್ತಿದ್ದು, ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ತಕ್ಷಣವೇ ಬರ ಪರಿಹಾರ ಕಾಮಗಾರಿಗಳನ್ನು ಆರಂಭಿಸಿ ಗ್ರಾಮೀಣ ಜನರಿಗೆ ಉದ್ಯೋಗ ಕಲ್ಪಿಸಬೇಕು ಎಂದು ಆಗ್ರಹಿಸಿದರು.

2025-26ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ಬೆಳೆಹಾನಿಗೊಳಗಾದ ರೈತರಿಗೆ ಇದುವರೆಗೆ ಬೆಳೆವಿಮೆ ಪರಿಹಾರ ದೊರೆತಿಲ್ಲ. ಓರಿಯಂಟಲ್ ಇನ್ಸುರೆನ್ಸ್ ಕಂಪನಿ ಹಾಗೂ ಸಂಬಂಧಪಟ್ಟ ಇಲಾಖೆಗಳು ಕೂಡಲೇ ಬಾಕಿ ಇರುವ ಬೆಳೆವಿಮೆ ಮಂಜೂರು ಮಾಡಬೇಕು. ಜೊತೆಗೆ 2026-27ನೇ ಸಾಲಿನ ಬೆಳೆಹಾನಿ ಪರಿಹಾರವನ್ನು ತ್ವರಿತವಾಗಿ ಬಿಡುಗಡೆ ಮಾಡಿ ರೈತರ ಸಾಲಮನ್ನಾ ಘೋಷಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಸಂಜೀವ ಹುಡೇದ, ರವಿ ವಗ್ಗನವರ, ವೀರಯ್ಯಸ್ವಾಮಿ ಹಿರೇಮಠ, ಈರಪ್ಪ ಸಿದ್ನೆಕೊಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> **ಮಳೆ ಇಲ್ಲದೆ ರೈತರ ಬದುಕು ಸಂಕಷ್ಟಕ್ಕೆ ಸಿಲುಕಿದೆ. ಸರ್ಕಾರ ತಕ್ಷಣ ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ಬೆಳೆವಿಮೆ ಹಾಗೂ ಪರಿಹಾರವನ್ನು ಬಿಡುಗಡೆ ಮಾಡಬೇಕು.**
>
> **- ಶಂಕರಗೌಡ ಮ. ಜಯನಗೌಡ್ರ,** ಜಿಲ್ಲಾಧ್ಯಕ್ಷರು, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ

---

## ಎಂಜಿಆರ್‌ಪಿಆರ್ ವಿಶ್ವವಿದ್ಯಾಲಯಕ್ಕೆ ಕುಲಪತಿಗಳಾಗಿ ಪ್ರೊ. ಡಾ. ನಾಡಗೌಡರ ಅಧಿಕಾರ ಸ್ವೀಕಾರ

**ವಿಜಯಸಾಕ್ಷಿ ಸುದ್ದಿ, ಗದಗ**

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ನೂತನ ಕುಲಪತಿಯಾಗಿ ನೇಮಕಗೊಂಡಿರುವ ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಅವರು ಗುರುವಾರ ಅಧಿಕಾರ ಸ್ವೀಕರಿಸಿದರು.

ಕರ್ನಾಟಕ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ತಾವರಚಂದ್ ಗೆಹ್ಲೋಟ್ ಅವರು ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಅವರನ್ನು ಕುಲಪತಿಯಾಗಿ ನೇಮಕ ಮಾಡಿದ್ದು, ಗುರುವಾರ ಅವರು ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು.

ಅಧಿಕಾರ ಸ್ವೀಕರಿಸಿದ ಬಳಿಕ ಮಾತನಾಡಿದ ಅವರು, ಈ ನೇಮಕ ತಮ್ಮ ಜೀವನದ ಅತ್ಯುನ್ನತ ಗೌರವ ಹಾಗೂ ಮಹತ್ತರ ಜವಾಬ್ದಾರಿಯಾಗಿದ್ದು, ವಿಶ್ವವಿದ್ಯಾಲಯವನ್ನು ಶೈಕ್ಷಣಿಕ ಶ್ರೇಷ್ಠತೆ, ಗುಣಮಟ್ಟದ ಸಂಶೋಧನೆ, ನವೋದ್ಯಮ, ವಿಸ್ತರಣಾ ಚಟುವಟಿಕೆಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಶಿಕ್ಷಣ ಕ್ಷೇತ್ರದಲ್ಲಿ ರಾಷ್ಟ್ರಮಟ್ಟದ ಆದರ್ಶ ಸಂಸ್ಥೆಯನ್ನಾಗಿ ರೂಪಿಸುವ ನಿಟ್ಟಿನಲ್ಲಿ ಎಲ್ಲರ ಸಹಕಾರದೊಂದಿಗೆ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು.



ಸಂಸ್ಥಾಪಕ ಕುಲಸಚಿವ ಹಾಗೂ ಪ್ರಭಾರ ಕುಲಪತಿಯಾಗಿ ಸೇವೆ ಸಲ್ಲಿಸಿರುವ ಅನುಭವದಿಂದ ವಿಶ್ವವಿದ್ಯಾಲಯದ ಧ್ಯೇಯ, ದೃಷ್ಟಿಕೋನ ಮತ್ತು ಭವಿಷ್ಯದ ಯೋಜನೆಗಳ ಬಗ್ಗೆ ಸಮಗ್ರ ಅರಿವು ಹೊಂದಿದ್ದು, ಎಲ್ಲ ಹಿತಾಸಕ್ತಿಪಕ್ಷಗಳ ಸಹಯೋಗದೊಂದಿಗೆ ಸಂಸ್ಥೆಯ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುವ ಸಂಕಲ್ಪ ವ್ಯಕ್ತಪಡಿಸಿದರು.

ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಅವರು ಕಾನೂನು ಶಿಕ್ಷಣ ಕ್ಷೇತ್ರದ ಹಿರಿಯ ಪ್ರಾಧ್ಯಾಪಕರಾಗಿದ್ದು, ಬೋಧನೆ, ಸಂಶೋಧನೆ, ಶೈಕ್ಷಣಿಕ ಆಡಳಿತ ಹಾಗೂ ಸಂಸ್ಥಾ ನಿರ್ಮಾಣ ಕ್ಷೇತ್ರಗಳಲ್ಲಿ ಗಮನಾರ್ಹ ಸೇವೆ ಸಲ್ಲಿಸಿದ್ದಾರೆ. ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳ ಸಿಂಡಿಕೇಟ್ ಹಾಗೂ ಶೈಕ್ಷಣಿಕ ಮಂಡಳಿಗಳ ಸದಸ್ಯರಾಗಿ, ಕರ್ನಾಟಕ ಕಾನೂನು ಆಯೋಗದ ಸದಸ್ಯರಾಗಿ ಸೇರಿದಂತೆ ಹಲವು ಮಹತ್ವದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿ ಉನ್ನತ ಶಿಕ್ಷಣ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ.

ನೂತನ ಕುಲಪತಿಯವರ ದೂರದೃಷ್ಟಿಯ ನಾಯಕತ್ವದಲ್ಲಿ ವಿಶ್ವವಿದ್ಯಾಲಯವು ಶೈಕ್ಷಣಿಕ ಶ್ರೇಷ್ಠತೆ, ಸಂಶೋಧನೆ ಮತ್ತು ಗ್ರಾಮೀಣಾಭಿವೃದ್ಧಿ ಕ್ಷೇತ್ರಗಳಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿ ರಾಷ್ಟ್ರಮಟ್ಟದಲ್ಲಿ ಮಾದರಿ ಸಂಸ್ಥೆಯಾಗಿ ಹೊರಹೊಮ್ಮಲಿದೆ ಎಂಬ ವಿಶ್ವಾಸವನ್ನು ವಿಶ್ವವಿದ್ಯಾಲಯ ಕುಟುಂಬ ವ್ಯಕ್ತಪಡಿಸಿದೆ.

---

## ಕೆಪಿಎಸ್ ಕಾರ್ಪೊರೇಟೀಕರಣಕ್ಕೆ ತೀವ್ರ ವಿರೋಧ




> **ಸಾರ್ವಜನಿಕ ಶಿಕ್ಷಣವನ್ನು ಕಾರ್ಪೊರೇಟ್ ಕಂಪನಿಗಳ ವಶಕ್ಕೆ ಒಪ್ಪಿಸುವ ಯಾವುದೇ ಪ್ರಯತ್ನವನ್ನು ಸಹಿಸಲಾಗುವುದಿಲ್ಲ. ಸರ್ಕಾರ ಆದೇಶ ಹಿಂಪಡೆಯದಿದ್ದರೆ ರಾಜ್ಯಾದ್ಯಂತ ವಿದ್ಯಾರ್ಥಿಗಳು, ಶಿಕ್ಷಕರು, ಪೋಷಕರು ಹಾಗೂ ಶಿಕ್ಷಣ ಪ್ರೇಮಿಗಳೊಂದಿಗೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಪ್ರಕಟಣೆಯಲ್ಲಿ ಎಚ್ಚರಿಕೆ ನೀಡಲಾಗಿದೆ.**

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಬ್ಲಿಕ್ ಶಾಲೆಗಳ (ಕೆಪಿಎಸ್) ಹೆಸರಿನಲ್ಲಿ ಸರ್ಕಾರಿ ಶಾಲೆಗಳ ಆಡಳಿತ ಹಾಗೂ ಶಿಕ್ಷಣ ವ್ಯವಸ್ಥೆಗೆ ಕಾರ್ಪೊರೇಟ್ ಹಸ್ತಕ್ಷೇಪಕ್ಕೆ ಅವಕಾಶ ಕಲ್ಪಿಸುವ ರಾಜ್ಯ ಸರ್ಕಾರದ ಇತ್ತೀಚಿನ ಆದೇಶವನ್ನು ತಕ್ಷಣ ಹಿಂಪಡೆಯಬೇಕು. ಇಲ್ಲವಾದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಸಾರ್ವಜನಿಕ ಶಿಕ್ಷಣ ಉಳಿಸಿ ರಾಜ್ಯ ಸಮಿತಿ ಹಾಗೂ ಎಐಡಿಎಸ್‌ಒ ಎಚ್ಚರಿಕೆ ನೀಡಿವೆ.

ಈ ಕುರಿತು ಬಿಡುಗಡೆ ಮಾಡಿರುವ ಪತ್ರಿಕಾ ಪ್ರಕಟಣೆಗೆ ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ರಾಜ್ಯ ಸಮಿತಿಯ ಅಧ್ಯಕ್ಷ ಪ್ರೊ. ಎ. ಮುರಿಗೆಪ್ಪ, ಹಿರಿಯ ಚಿಂತಕ ಡಾ. ಕೆ. ಮರುಳಸಿದ್ದಪ್ಪ, ಸಂಸ್ಕೃತಿ ಚಿಂತಕ ಪ್ರೊ. ಎಸ್.ಜಿ. ಸಿದ್ದರಾಮಯ್ಯ, ಹಿರಿಯ ಸಾಹಿತಿ ಹಾಗೂ ರಾಜ್ಯ ಸಮಿತಿಯ ಅಧ್ಯಕ್ಷ ಪ್ರೊ. ಅಲ್ಲಮಪ್ರಭು ಬೆಟ್ಟದೂರು, ಅಭಿವೃದ್ಧಿ ಶಿಕ್ಷಣ ತಜ್ಞ ನಿರಂಜನಾರಾಧ್ಯ ವಿ.ಪಿ., ಹಿರಿಯ ಸಾಹಿತಿಗಳಾದ ಡಾ. ಮಾಲತಿ ಪಟ್ಟಣಶೆಟ್ಟಿ ಮತ್ತು ಡಾ. ಹೇಮಾ ಪಟ್ಟಣಶೆಟ್ಟಿ, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ಸಬಿಹಾ ಭೂಮಿಗೌಡ, ಹಿರಿಯ ಹೋರಾಟಗಾರ ಎಸ್.ಆರ್. ಹಿರೇಮಠ, ಲೇಖಕಿ ರೂಪ ಹಾಸನ, ಸಾಮಾಜಿಕ ಹೋರಾಟಗಾರ ಉಗ್ರನರಸಿಂಹೇಗೌಡ, ಗುಲ್ಬರ್ಗ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ. ಕಿರಣ ಗಾಜನೂರು, ಹಿರಿಯ ಕನ್ನಡಪರ ಹೋರಾಟಗಾರ ಅಶೋಕ್ ಚಂದರಗಿ, ಎಐಡಿಎಸ್‌ಒ ರಾಜ್ಯಾಧ್ಯಕ್ಷ ಅಶ್ವಿನಿ ಕೆ.ಎಸ್. ಹಾಗೂ ರಾಜ್ಯ ಕಾರ್ಯದರ್ಶಿ ಅಜಯ್ ಕಾಮತ್ ಸಹಿ ಹಾಕಿದ್ದಾರೆ.

ಜೂನ್ 18, 2026ರಂದು ಹೊರಡಿಸಿರುವ ಸರ್ಕಾರಿ ಆದೇಶದ ಮೂಲಕ ರಾಜ್ಯದ 1,000 ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಶಾಲೆಗಳಾಗಿ ಮೇಲ್ದರ್ಜೆಗೆ ಏರಿಸುವ ನೆಪದಲ್ಲಿ ಕಾರ್ಪೊರೇಟ್ ಕಂಪನಿಗಳಿಗೆ ಶಾಲಾ ಆಡಳಿತ, ಪಠ್ಯಕ್ರಮ ಹಾಗೂ ಬೋಧನಾ ಪ್ರಕ್ರಿಯೆಯಲ್ಲೇ ಹಸ್ತಕ್ಷೇಪಕ್ಕೆ ಅವಕಾಶ ನೀಡಲಾಗಿದೆ ಎಂದು ಪ್ರಕಟಣೆಯಲ್ಲಿ ಆರೋಪಿಸಲಾಗಿದೆ.

ಖಾಸಗಿ ಸಂಸ್ಥೆಗಳಿಗೆ ಶಿಕ್ಷಕರ ನೇಮಕ, ಕೌಶಲ್ಯಾಧಾರಿತ ಪಠ್ಯಕ್ರಮ ರೂಪಿಸುವ ಅಧಿಕಾರ ನೀಡುವುದು, ಸರ್ಕಾರಿ ಶಾಲೆಗಳಲ್ಲಿ ಸಹ-ಬ್ರ್ಯಾಂಡಿಂಗ್‌ಗೆ ಅವಕಾಶ ಕಲ್ಪಿಸುವುದು ಹಾಗೂ ಶಾಲಾ ಆಡಳಿತ ಮಂಡಳಿಯಲ್ಲಿ ಕಾರ್ಪೊರೇಟ್ ಪ್ರತಿನಿಧಿಗಳನ್ನು ಸೇರಿಸುವುದು ಸಾರ್ವಜನಿಕ ಶಿಕ್ಷಣ ವ್ಯವಸ್ಥೆಗೆ ಮಾರಕವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸರ್ಕಾರ ಶಿಕ್ಷಣದ ಸಾಂವಿಧಾನಿಕ ಜವಾಬ್ದಾರಿಯಿಂದ ಹಿಂದೆ ಸರಿಯದೆ, ಸಿಎಸ್‌ಆರ್ ಮಾರ್ಗಸೂಚಿಗಳನ್ನು ತಕ್ಷಣ ಹಿಂಪಡೆಯಬೇಕು. ರಾಜ್ಯ ಶಿಕ್ಷಣ ನೀತಿ ಆಯೋಗದ ವರದಿಯನ್ನು ಸಾರ್ವಜನಿಕಗೊಳಿಸಿ ಶಿಕ್ಷಣ ತಜ್ಞರು, ಸಾಹಿತಿಗಳು, ವಿದ್ಯಾರ್ಥಿ ಸಂಘಟನೆಗಳು ಹಾಗೂ ಸಾರ್ವಜನಿಕರೊಂದಿಗೆ ಸಮಾಲೋಚನೆ ನಡೆಸಬೇಕು. ಶಿಕ್ಷಣಕ್ಕೆ ಅಗತ್ಯ ಅನುದಾನವನ್ನು ಬಜೆಟ್‌ನಲ್ಲಿಯೇ ಒದಗಿಸಬೇಕು ಎಂದು ಪ್ರಕಟಣೆಯಲ್ಲಿ ಆಗ್ರಹಿಸಲಾಗಿದೆ.

---

### ವೆಚ್ಚ ಕಡಿಮೆ, ಇಳುವರಿ ಹೆಚ್ಚಳಕ್ಕೆ ಆಧುನಿಕ ಕೃಷಿ ಪದ್ಧತಿ ಅಳವಡಿಸಿಕೊಳ್ಳುವಂತೆ ಶಾಸಕ ಲಮಾಣಿ ಸಲಹೆ

## ಡ್ರೋನ್‌ನಿಂದ ಗೊಬ್ಬರ ಸಿಂಪಡಣೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರೈತರ ಉತ್ಪಾದನಾ ವೆಚ್ಚ ಕಡಿಮೆ ಮಾಡಿ ಆಧುನಿಕ ಕೃಷಿ ಪದ್ಧತಿಗಳನ್ನು ಉತ್ತೇಜಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಪರಿಚಯಿಸಿರುವ ನ್ಯಾನೋ ಯೂರಿಯಾ ಗೊಬ್ಬರದ ಸಮರ್ಪಕ ಬಳಕೆಯಿಂದ ರೈತರಿಗೆ ಹೆಚ್ಚಿನ ಪ್ರಯೋಜನ ದೊರೆಯಲಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ತಾಲೂಕಿನ ಸೂರಣಗಿ ಗ್ರಾಮದ ವಿಎಸ್‌ಎಸ್ ಬ್ಯಾಂಕ್ ವತಿಯಿಂದ ರೈತ ಬಸವರಾಜ ಸಾಸಲವಾಡ ಅವರ ಜೋಳದ ಹೊಲದಲ್ಲಿ ಆಯೋಜಿಸಿದ್ದ ಡ್ರೋನ್ ಮೂಲಕ ನ್ಯಾನೋ ಯೂರಿಯಾ ಸಿಂಪರಣಾ ಪ್ರಾತ್ಯಕ್ಷಿಕೆ ಹಾಗೂ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾಂಪ್ರದಾಯಿಕ ಹರಳು ರೂಪದ ಯೂರಿಯಾ ಗೊಬ್ಬರಕ್ಕೆ ಪರ್ಯಾಯವಾಗಿ ದ್ರವ ರೂಪದ ನ್ಯಾನೋ ಯೂರಿಯಾವನ್ನು ಕೇಂದ್ರ ಸರ್ಕಾರ ಪರಿಚಯಿಸಿದ್ದು, ಕಡಿಮೆ ಪ್ರಮಾಣದಲ್ಲಿಯೇ ಉತ್ತಮ ಫಲಿತಾಂಶ ನೀಡುವ ಸಾಮರ್ಥ್ಯ ಇದಕ್ಕಿದೆ. ಇದರಿಂದ ಗೊಬ್ಬರ ಬಳಕೆ ಕಡಿಮೆಯಾಗುವುದರ ಜೊತೆಗೆ ಸಾಗಣೆ ಮತ್ತು ಸಿಂಪರಣೆ ಸುಲಭವಾಗಲಿದೆ. ಡ್ರೋನ್ ತಂತ್ರಜ್ಞಾನದ ಬಳಕೆಯಿಂದ ಸಮಯ ಹಾಗೂ ಕಾರ್ಮಿಕ ವೆಚ್ಚವೂ ಗಣನೀಯವಾಗಿ ಉಳಿತಾಯವಾಗುತ್ತದೆ ಎಂದು ಹೇಳಿದರು. ನ್ಯಾನೋ ಯೂರಿಯಾದ ಸರಿಯಾದ ಬಳಕೆ, ಸಿಂಪರಣೆಯ ಹಂತಗಳು ಹಾಗೂ ಅದರ ಪ್ರಯೋಜನಗಳ ಕುರಿತು ಕೃಷಿ ಇಲಾಖೆ ಅಧಿಕಾರಿಗಳು ರೈತರಿಗೆ ನಿರಂತರ ಜಾಗೃತಿ ಮೂಡಿಸಬೇಕು. ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡರೆ ಉತ್ಪಾದಕತೆ ಹೆಚ್ಚುವುದರ ಜೊತೆಗೆ ಕೃಷಿಯೂ ಹೆಚ್ಚು ಲಾಭದಾಯಕವಾಗಲಿದೆ ಎಂದು ತಿಳಿಸಿದರು.



> **ಡ್ರೋನ್ ತಂತ್ರಜ್ಞಾನ ಮತ್ತು ನ್ಯಾನೋ ಯೂರಿಯಾ ಬಳಕೆಯಿಂದ ರೈತರ ವೆಚ್ಚ ಕಡಿಮೆಯಾಗಿ ಕೃಷಿ ಹೆಚ್ಚು ಲಾಭದಾಯಕವಾಗಲಿದೆ.**
>
> **- ಡಾ. ಚಂದ್ರು ಲಮಾಣಿ,** ಶಾಸಕ

ಕಾರ್ಯಕ್ರಮದಲ್ಲಿ ವಿಎಸ್‌ಎಸ್ ಬ್ಯಾಂಕ್ ಅಧ್ಯಕ್ಷೆ ಶಶಿಕಲಾ ಸಾಸಲವಾಡ, ನಿರ್ದೇಶಕರಾದ ಬಸವರಾಜ ಚಕ್ರಸಾಲಿ, ನಾಗರಾಜ ಹಾವಳಕೇರಿ, ವೀರೇಶ ಸಾಸಲವಾಡ, ಸಚಿನ್ ಮೇಲ್ಮುರಿ, ತುಕಾರಾಮ ಲಮಾಣಿ, ಬಸವರಾಜ ಕರಡಿಕೊಪ್ಪ, ಅರುಣ ಕಳ್ಳಿಹಾಳ, ಕುಮಾರ ಬೆಟಗೇರಿ, ಮಲ್ಲಿಕಾರ್ಜುನ ಶೀರನಹಳ್ಳಿ, ಫಕ್ಕೀರೇಶ ಕುರುಬರ, ಅಪ್ಪಣ್ಣ ಬಲಿಗಾರ, ಈರಣ್ಣ ಶೀರನಹಳ್ಳಿ ಸೇರಿದಂತೆ ಬ್ಯಾಂಕಿನ ಪದಾಧಿಕಾರಿಗಳು, ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಮಳೆಗಾಗಿ ರೈತ ಮಹಿಳೆಯರ ವಿಶೇಷ ಪೂಜೆ | ಕೊಡ ತಿರುಗಿಸುವ ಸಂಪ್ರದಾಯ, ಸೃಷ್ಟಿ ಮೇಟಿಗೆ ಸನ್ಮಾನ

# ಧರೆಗೆ ಇಳಿದು ಬೇಗ ಬಾ ಮಳೆರಾಯ..!

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮುಂಗಾರು ಕೈಕೊಟ್ಟು ಹೊಲಗಳಲ್ಲಿ ಬೆಳೆಗಳು ಒಣಗಲಾರಂಭಿಸಿರುವ ಹಿನ್ನೆಲೆಯಲ್ಲಿ ಸಮೀಪದ ಜಕ್ಕಲಿ ಗ್ರಾಮದ ರೈತ ಮಹಿಳೆಯರು ಶ್ರೀ ಕಲ್ಮೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಧರೆಗೆ ಇಳಿದು ಬೇಗ ಬಾ ಮಳೆರಾಯ ಎಂದು ವರುಣ ದೇವರಲ್ಲಿ ಪ್ರಾರ್ಥಿಸಿದರು.

ಹೆಸರು, ಜೋಳ, ತೊಗರಿ ಸೇರಿದಂತೆ ವಿವಿಧ ಬೆಳೆಗಳ ಬಿತ್ತನೆ ಮಾಡಿದ ರೈತರು ಮಳೆ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆ, ಮಹಿಳೆಯರು ಶ್ರೀ ಕಲ್ಮೇಶ್ವರ ಹಾಗೂ ಉಕ್ಕಿ ಬಸವಣ್ಣ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ ಎಂದು ಸಂಕಲ್ಪ ಮಾಡಿದರು. ಕಳೆದ ಹತ್ತು ವರ್ಷಗಳಿಂದ ಈ ಸಂಪ್ರದಾಯವನ್ನು ಗ್ರಾಮದಲ್ಲಿ ನಿರಂತರವಾಗಿ ಆಚರಿಸಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಮಳೆ ಭವಿಷ್ಯ ತಿಳಿಯುವ ಪಾರಂಪರಿಕ ಆಚರಣೆಗಳಾದ ಸೆಗಣಿಯ ಬೂದಪ್ಪ ಹಾಗೂ ಜೋಳದ ದಂಟುಗಳ ಮೂಲಕ ಮಳೆ ಅಂದಾಜಿಸುವ ಪದ್ಧತಿ ನಡೆಸಲಾಯಿತು. ಬಳಿಕ ಹೂಗಳಿಂದ ಅಲಂಕರಿಸಿದ ತುಂಬಿದ ಕೊಡವನ್ನು ಮಹಿಳೆಯರು ಮತ್ತು ಮಕ್ಕಳು ಸೇರಿ ತಿರುಗಿಸುವ ಮೂಲಕ ಮಳೆಯ ಭವಿಷ್ಯ ತಿಳಿಯುವ ಸಂಪ್ರದಾಯಕ್ಕೂ ಜೀವ ತುಂಬಿದರು.

ಈ ವೇಳೆ ಸುಮ್ಮವ್ವ ಹೂಗಾರ ಅವರು ಉತ್ತಮ ಮಳೆಯಾಗಿ ರೈತರ ಬದುಕು ಸಮೃದ್ಧಿಯಾಗಲಿ ಎಂದು ದೇವರ ಸನ್ನಿಧಿಯಲ್ಲಿ ಐದು ಸುತ್ತು ದೀಡ ನಮಸ್ಕಾರ ಹಾಕಿ ಹರಕೆ ಸಲ್ಲಿಸಿದ್ದು ಭಕ್ತರ ಗಮನ ಸೆಳೆಯಿತು.

ಮಹಿಳೆಯರು ಮಡಿ ಬಟ್ಟೆ ಧರಿಸಿ ಕೊಡಗಳಲ್ಲಿ ನೀರು ತುಂಬಿಕೊಂಡು ಓಂ ನಮಃ ಶಿವಾಯ ಜಪಿಸುತ್ತಾ



ಜಲಾಭಿಷೇಕ ನೆರವೇರಿಸಿದರು. ಬಸವಣ್ಣನವರ ವಚನಗಳು, ಭಕ್ತಿಪದಗಳು ಹಾಗೂ ಜನಪದ ಗೀತೆಗಳ ಗಾಯನದೊಂದಿಗೆ ದೇವಸ್ಥಾನದಲ್ಲಿ ಭಕ್ತಿಯ ವಾತಾವರಣ ನಿರ್ಮಾಣವಾಯಿತು. ಬಳಿಕ ಶಿರಾ ಹಾಗೂ ಸಂಗಟಿ-ಸಾರು ಅನ್ನಸಂತರ್ಪಣೆ ನಡೆಯಿತು.

ಇದೇ ಸಂದರ್ಭದಲ್ಲಿ ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯ ಹರ್ರಾ ಟಾಪ್ ಶಿಖರ ಏರಿ ಸಾಧನೆ ಮಾಡಿದ ಜಕ್ಕಲಿ ಗ್ರಾಮದ ಪ್ರತಿಭಾವಂತ ಯುವತಿ ಸೃಷ್ಟಿ ಉಮೇಶ ಮೇಟಿ ಅವರನ್ನು ಶ್ರೀ ಕಲ್ಮೇಶ್ವರ ದೇವಸ್ಥಾನ ಸಮಿತಿಯಿಂದ ಸನ್ಮಾನಿಸಲಾಯಿತು.

ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಮಲ್ಲಿಕಾರ್ಜುನ ಮೇಟಿ ಹಾಗೂ ಡಾ. ಎ.ವಿ. ನರೇಗಲ್ಲ, ಸೃಷ್ಟಿ ಮೇಟಿ ಅವರ ಸಾಧನೆ ಗ್ರಾಮೀಣ ಯುವಜನತೆಗೆ ಸ್ಫೂರ್ತಿಯಾಗಿದ್ದು, ಹಳ್ಳಿಯ ಪ್ರತಿಭೆಗಳು ರಾಷ್ಟ್ರೀಯ ಮಟ್ಟದಲ್ಲೂ ಸಾಧನೆ ಮಾಡಬಹುದೆಂಬುದನ್ನು ಸಾಬೀತುಪಡಿಸಿದ್ದಾರೆ ಎಂದು ಶ್ಲಾಘಿಸಿದರು.

ಗುರುಲಿಂಗಮೂರ್ತಿ ಮಂಟಯ್ಯನವರಮಠ, ಅಶೋಕಪ್ಪ ಯಾವಗಲ್ಲ, ಪ್ರಭು ರೇಣುಕಮಠ, ಸಂಗಮೇಶ ಮೆಣಸಗಿ, ಶೇಖರ ಯಾವಗಲ್ಲ, ಸುಭಾಷ ಪಲ್ಲೇದ, ಶಿವಪುತ್ರಯ್ಯ ಸರಗಣಾಚಾರಿ, ಮುನಿಯಪ್ಪ ಪಲ್ಲೇದ, ಚನ್ನಬಸವ ಅರಹುಣಸಿ, ಉಮೇಶ ಮೇಟಿ, ಮಂಜುನಾಥ ಪಲ್ಲೇದ, ಕುಬೇರಪ್ಪ ಪಲ್ಲೇದ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ನೀಲಾಂಬಿಕೆ ಮೇಟಿ ಹಾಗೂ ಮಹೇಶಮ್ಮ ಹೈತಾಪೂರ ಅವರ ನೇತೃತ್ವದಲ್ಲಿ ನೂರಾರು ರೈತ ಮಹಿಳೆಯರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

## ಮಳೆಗಾಗಿ ಕೊಡ ತಿರುಗಿಸುವ ವಿಶಿಷ್ಟ ಸಂಪ್ರದಾಯ

ಜಕ್ಕಲಿ ಗ್ರಾಮದಲ್ಲಿ ಮಳೆಗಾಗಿ ಪಾರಂಪರಿಕ ಕೊಡ ತಿರುಗಿಸುವ ಆಚರಣೆ ವಿಶೇಷ ಆಕರ್ಷಣೆಯಾಗಿತ್ತು. ಹೂಗಳಿಂದ ಅಲಂಕರಿಸಿದ ನೀರು ತುಂಬಿದ ಕೊಡದ ಕೆಳಗೆ ಜೋಳ ಹಾಕಿ, ಮಕ್ಕಳು ಹಾಗೂ ಸುಮಂಗಲಿ ಮಹಿಳೆಯರು ಸೇರಿ ಕೊಡ ತಿರುಗಿಸಿದರು. ಗ್ರಾಮಸ್ಥರ ನಂಬಿಕೆಯಂತೆ ಕೊಡ ವೇಗವಾಗಿ ತಿರುಗಿದರೆ ಉತ್ತಮ ಮಳೆಯಾಗುತ್ತದೆ, ನಿಧಾನವಾಗಿ ತಿರುಗಿದರೆ ಕಡಿಮೆ ಮಳೆಯಾಗುತ್ತದೆ. ಕೊಡದಿಂದ ನೀರು ಹೊರಗೆ ಚೆಲ್ಲಿದರೆ ಶೀಘ್ರದಲ್ಲೇ ಮಳೆಯಾಗುತ್ತದೆ ಎಂಬ ನಂಬಿಕೆ ಇಂದಿಗೂ ಜೀವಂತವಾಗಿದೆ. ಗ್ರಾಮೀಣ ಸಂಪ್ರದಾಯ ಮತ್ತು ರೈತರ ಪ್ರಕೃತಿ ನಂಬಿಕೆಗೆ ಈ ಆಚರಣೆ ಸಾಕ್ಷಿಯಾಯಿತು

ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ನಾಲ್ಕು ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

# ಪ್ರೋತ್ಸಾಹವೇ ಸಾಧನೆಯ ಮೆಟ್ಟಿಲು




**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣವು ವ್ಯಕ್ತಿಯನ್ನು ಸುಶಿಕ್ಷಿತನನ್ನಾಗಿ ರೂಪಿಸುವುದರ ಜೊತೆಗೆ ವ್ಯಕ್ತಿತ್ವ ವಿಕಸನ ಮತ್ತು ಉನ್ನತ ಸಾಧನೆಗೆ ಭದ್ರ ಬುನಾದಿ ಹಾಕುತ್ತದೆ ಎಂದು ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಹೇಳಿದರು.

ಗದಗ ತಾಲೂಕಿನ ಕದಡಿ ಸರ್ಕಾರಿ ಪ್ರೌಢಶಾಲೆಯಲ್ಲಿ ಪ್ರತಿಷ್ಠಾನದ ವತಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ನಗದು ಬಹುಮಾನ, ಅಭಿನಂದನಾ ಪತ್ರ, ಕಾಲೇಜು ಬ್ಯಾಗ್ ಹಾಗೂ ಸಿಹಿ ಪೊಟ್ಟಣ ನೀಡಿ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಿ ಅವರು ಮಾತನಾಡಿದರು.

ಕಳೆದ 12 ವರ್ಷಗಳಿಂದ ಗ್ರಾಮೀಣ ಪ್ರದೇಶದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಮೂಲಕ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುತ್ತಿರುವ ಪ್ರತಿಷ್ಠಾನ, ಗುರುಗಳಾದ ಬಿ.ಜಿ. ಅಣ್ಣಿಗೇರಿ ಅವರ ಶಿಕ್ಷಣ ಸೇವೆಯನ್ನು ಸ್ಮರಿಸುವ ಕಾರ್ಯವನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿದೆ ಎಂದು ಹೇಳಿದರು. ಕದಡಿ ಶಾಲೆಯ ಯಲ್ಲವ್ವ ಕಲ್ಲೂರ, ಶಶಿಧರ ಗಾಣಿಗೇರ, ಸುಮಾ ಪೂಜಾರ, ಭಾಗ್ಯಶ್ರೀ ಹಡಪದ ಹಾಗೂ ಶಿವಕುಮಾರ ಕರಡಿ ಅವರಿಗೆ ಪ್ರತಿಭಾ ಪುರಸ್ಕಾರ ಪ್ರದಾನಿಸಲಾಯಿತು. ಸಮಾರಂಭದ ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯಿನಿ ಎಸ್.ವಿ. ಗಂಗಪ್ಪನವರ ವಹಿಸಿದ್ದರು.

**ಗ್ರಾಮೀಣ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವುದು ನಮ್ಮ ಪ್ರತಿಷ್ಠಾನದ ಧ್ಯೇಯ. ಶಿಕ್ಷಣವೇ ಜೀವನದ ಯಶಸ್ಸಿನ ಭದ್ರ ಅಡಿಪಾಯ.**

**– ಶಿವಕುಮಾರ ಪಾಟೀಲ,** ಅಧ್ಯಕ್ಷರು, ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ

ಇದೇ ಸಂದರ್ಭದಲ್ಲಿ ಲಿಂಗದಾಳ, ಹೊಂಬಳ ಹಾಗೂ ಹಿರೇಹಂದಿಗೋಳ ಸರ್ಕಾರಿ ಪ್ರೌಢಶಾಲೆಗಳ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೂ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಲಿಂಗದಾಳದಲ್ಲಿ ಸೈಹ್ಯಾದ್ರಿ ಬಂಡಿವಾಡ, ಸುಷ್ಮಾ ಬಂಡಿವಾಡ, ಸಮರ್ಥ ನವಲಗುಂದ, ಸಹನಾ ಕಣವಿ ಹಾಗೂ ವಿದ್ಯಾ ಹುಂದಗೇರಿ, ಹೊಂಬಳದಲ್ಲಿ ದೀಪಾ ಚಿಕ್ಕನಗೌಡ್ರ, ಪ್ರಿಯಾಂಕಾ ಕುಂಬಾರ, ಅನುಪಮಾ ದಿಡ್ಡಿಮನಿ, ಸುಪ್ರಿತಾ ಗಂಗಿ ಹಾಗೂ ಆಯಿಷಾ ಹಮ್ಮಸಾಗರ, ಹಿರೇಹಂದಿಗೋಳದಲ್ಲಿ ಪ್ರಗತಿ ಹಿರೇಹೊಳಿ, ಪವಿತ್ರಾ ತಳವಾರ, ಕಾವ್ಯಾ ಯಲಬುರ್ಗಿ, ಸ್ಫೂರ್ತಿ ನರ್ತಿಯವರ ಹಾಗೂ ಪವಿತ್ರಾ ಕುರ್ತಕೋಟಿ ಅವರನ್ನು ಸನ್ಮಾನಿಸಲಾಯಿತು.

ನಾಲ್ಕೂ ಶಾಲೆಗಳ ಮುಖ್ಯೋಪಾಧ್ಯಾಯರು, ಶಿಕ್ಷಕರು, ಎಸ್‌ಡಿಎಂಸಿ ಪದಾಧಿಕಾರಿಗಳು ಹಾಗೂ ಪ್ರತಿಷ್ಠಾನದ ಪದಾಧಿಕಾರಿಗಳಾದ ಶಿವಾನಂದ ಕಟ್ಟಿ, ಗುರುರಾಜ ಅಣ್ಣಿಗೇರಿ, ಸ್ನೇಹಾ ಖಟವಟೆ, ಮಮತಾಜ್ ಹಾಗೂ ಪ್ರಸನ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಇನ್ನರ್‌ವ್ಹೀಲ್‌ಗೆ ಹೊಸ ಸಾರಥಿಗಳ ಪದಗ್ರಹಣ ಇಂದು

**ವಿಜಯಸಾಕ್ಷಿ ಸುದ್ದಿ, ಗದಗ**

ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ 2026-27ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಇಂದು ನಡೆಯಲಿದ್ದು, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಮಹಿಳೆಯರು ಸಂಸ್ಥೆಯ ಜವಾಬ್ದಾರಿಗಳನ್ನು ವಹಿಸಿಕೊಳ್ಳಲಿದ್ದಾರೆ.

**ಅಧ್ಯಕ್ಷೆ- ಮಂಜುಳಾ ಅಕ್ಕಿ:** ಲಕ್ಷ್ಮೇಶ್ವರ ಮೂಲದ ಶ್ರೀಮತಿ ಮಂಜುಳಾ ಎಫ್. ಅಕ್ಕಿ ಅವರು ಸಂಸ್ಥೆಯ ನೂತನ ಅಧ್ಯಕ್ಷೆಯಾಗಿ ಅಧಿಕಾರ ಸ್ವೀಕರಿಸಲಿದ್ದಾರೆ. ಬಿ.ಎ., ಬಿ.ಎಡ್. ಹಾಗೂ ಎಂ.ಎ. ಪದವೀಧರರಾಗಿರುವ ಅವರು 2014ರಿಂದ ಇನ್ನರ್‌ವ್ಹೀಲ್ ಕ್ಲಬ್‌ನ ಸಕ್ರಿಯ ಸದಸ್ಯೆಯಾಗಿದ್ದು, ಐಎಸ್‌ಒ, ಜಂಟಿ ಕಾರ್ಯದರ್ಶಿ, ಕಾರ್ಯದರ್ಶಿ ಹಾಗೂ ಉಪಾಧ್ಯಕ್ಷೆ ಸೇರಿದಂತೆ ವಿವಿಧ ಹುದ್ದೆಗಳನ್ನು ಯಶಸ್ವಿಯಾಗಿ ನಿರ್ವಹಿಸಿದ್ದಾರೆ.

**ಕಾರ್ಯದರ್ಶಿ ಪೂಜಾ ಭೂಮಾ:** ಶ್ರೀಮತಿ ಪೂಜಾ ಕಿರಣ್ ಭೂಮಾ ಅವರು ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಲಿದ್ದಾರೆ. ಬಿ.ಕಾಂ. ಹಾಗೂ ಎಂ.ಕಾಂ. ಪದವೀಧರರಾಗಿರುವ ಅವರು ಗದುಗಿನ ಉದ್ಯಮಿಗಳಾದ ಕಿರಣ್ ಭೂಮಾ ಅವರ ಧರ್ಮಪತ್ನಿಯಾಗಿದ್ದು, ಶುಭಂ ಜುವೆಲರ್ಸ್ ಸಂಸ್ಥೆಯ ಪ್ರೊಪ್ರೈಟರ್ ಆಗಿದ್ದಾರೆ. ಕ್ಲಬ್‌ನಲ್ಲಿ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿರುವ ಅವರು ಓದು ಹಾಗೂ ಚಿತ್ರಕಲೆಯಲ್ಲಿ ಆಸಕ್ತಿ ಹೊಂದಿದ್ದಾರೆ.

**ಖಜಾಂಚಿ ವೀಣಾ ಕಾವೇರಿ:** ಶ್ರೀಮತಿ ವೀಣಾ ಕಾವೇರಿ ಅವರು ಖಜಾಂಚಿಯಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಎಂ.ಎಸ್‌ಸಿ., ಬಿ.ಎಡ್. ಪದವೀಧರರಾಗಿರುವ ಅವರು ಶಿಕ್ಷಕಿಯಾಗಿ ಹಾಗೂ ಉಪನ್ಯಾಸಕಿಯಾಗಿ ಸೇವೆ ಸಲ್ಲಿಸಿದ್ದಾರೆ. ಕಳೆದ ನಾಲ್ಕು ವರ್ಷಗಳಿಂದ ಕ್ಲಬ್‌ನ ಸಕ್ರಿಯ ಸದಸ್ಯೆಯಾಗಿದ್ದು, ಕಳೆದ ಸಾಲಿನಲ್ಲಿ ಸಂಪಾದಕಿಯಾಗಿ ಕಾರ್ಯನಿರ್ವಹಿಸಿದ್ದರು.

**ಐಎಸ್‌ಒ ವಿದ್ಯಾ ಶಿವನಗುತ್ತಿ:** ಶ್ರೀಮತಿ ವಿದ್ಯಾ ಶಿವನಗುತ್ತಿ ಅವರು ಐಎಸ್‌ಒ ಆಗಿ ಸೇವೆ ಸಲ್ಲಿಸಲಿದ್ದಾರೆ. ವಿದ್ಯಾರ್ಥಿ ಜೀವನದಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಮಿಂಚಿದ್ದ ಅವರು ರೈಫಲ್ ಶೂಟಿಂಗ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದರು. ಅಕ್ಕನ ಬಳಗದ ಸಕ್ರಿಯ ಸದಸ್ಯೆಯಾಗಿರುವ ಅವರು ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ.

**ಸಂಪಾದಕಿ ಮೀನಾಕ್ಷಿ ಕೊರವನವರ:** ಶ್ರೀಮತಿ ಮೀನಾಕ್ಷಿ ಕೊರವನವರ ಅವರು ಸಂಸ್ಥೆಯ ಸಂಪಾದಕಿಯಾಗಿ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ. ಅಧ್ಯಾಪಕಿಯಾಗಿ ಸೇವೆ ಸಲ್ಲಿಸಿರುವ ಅವರು ಇನ್ನರ್‌ವ್ಹೀಲ್ ಕ್ಲಬ್ ಹಾಗೂ ಕದಳಿ ವೇದಿಕೆಯ ಸಕ್ರಿಯ ಸದಸ್ಯೆಯಾಗಿದ್ದು, ವಿವಿಧ ಸಾಮಾಜಿಕ ಸೇವಾ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡಿದ್ದಾರೆ. ತೋಟಗಾರಿಕೆ ಮತ್ತು ಚಿತ್ರಕಲೆ ಅವರ ಹವ್ಯಾಸಗಳಾಗಿವೆ.

ನೂತನ ಪದಾಧಿಕಾರಿಗಳ ತಂಡದ ನೇತೃತ್ವದಲ್ಲಿ ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಮತ್ತಷ್ಟು ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ಕೈಗೊಳ್ಳುವ ವಿಶ್ವಾಸವನ್ನು ಸದಸ್ಯರು ವ್ಯಕ್ತಪಡಿಸಿದ್ದಾರೆ.



# ಮೂರು ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಪ್ರಕ್ರಿಯೆ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೆ ಸ್ಥಗಿತಗೊಂಡಿರುವ ಗದಗ ತಾಲೂಕಿನ ಓಂ ಸಾಯಿ ಮಹಿಳಾ ಪತ್ತಿನ ಸಹಕಾರ ಸಂಘ ನಿ., ಮುಳಗುಂದ, ಶ್ರೀ ಮಹಾಲಕ್ಷ್ಮೀ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಮುಳಗುಂದ ಹಾಗೂ ಮೌಲಾನಾ ಆಜಾದ್ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಗದಗ ಸಂಘಗಳ ನೋಂದಣಿ ರದ್ದುಗೊಳಿಸುವ ಪ್ರಕ್ರಿಯೆ ಆರಂಭಿಸಲಾಗಿದ್ದು, ಸಂಬಂಧಪಟ್ಟವರು ಏಳು ದಿನಗಳೊಳಗೆ ಆಕ್ಷೇಪಣೆ ಸಲ್ಲಿಸುವಂತೆ ಸಹಕಾರ ಇಲಾಖೆ ಪ್ರಕಟಣೆ ಹೊರಡಿಸಿದೆ.

ತಮ್ಮ ಬೈಲಾದಲ್ಲಿರುವ ಉದ್ದೇಶಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸದೆ ಹಲವು ವರ್ಷಗಳಿಂದ ಸ್ಥಗಿತಗೊಂಡಿರುವ ಈ ಮೂರು ಸಹಕಾರ ಸಂಘಗಳನ್ನು ಸಮಾಪನೆಗೊಳಿಸಿ, ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿದ್ದು, ಸಮಾಪನಾಧಿಕಾರಿಯನ್ನು ನೇಮಿಸಿದ್ದಾರೆ.

ಸಮಾಪನೆಗೊಂಡಿರುವ ಸಂಘಗಳು ತಮ್ಮ ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅಲ್ಲದೆ, ಸಂಘಗಳ ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಾಹಕರ ಕುರಿತು ಮಾಹಿತಿ ಲಭ್ಯವಿಲ್ಲ.

ಈ ಸಂಘಗಳಿಗೆ ಸಂಬಂಧಿಸಿದಂತೆ ಯಾರಿಗಾದರೂ ಹಣಕಾಸಿನ ಬಾಕಿ ವ್ಯವಹಾರಗಳಿದ್ದರೆ, ಅಗತ್ಯ ದಾಖಲೆಗಳೊಂದಿಗೆ ಪ್ರಕಟಣೆ ಹೊರಡಿಸಿದ ಏಳು ದಿನಗಳೊಳಗೆ ಗದಗ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯ ಅಧೀಕ್ಷಕರನ್ನು ಸಂಪರ್ಕಿಸಿ ಆಕ್ಷೇಪಣೆ ಸಲ್ಲಿಸಬಹುದು.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ಈ ಮೂರು ಸಂಘಗಳ ಆಸ್ತಿಪಾಸ್ತಿಗಳನ್ನು ನಿಯಮಾನುಸಾರ ಶೂನ್ಯಗೊಳಿಸಿ, ನೋಂದಣಿ ರದ್ದುಗೊಳಿಸುವ ಕ್ರಮ ಕೈಗೊಳ್ಳಲಾಗುವುದು.

ನಂತರ ಸಲ್ಲಿಕೆಯಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿ ತಿಳಿಸಿದ್ದಾರೆ.

ಮಳೆ ಕೊರತೆ ಎದುರಿಸಲು ಪರ್ಯಾಯ ಬೆಳೆ, ತೇವಾಂಶ ಸಂರಕ್ಷಣೆಗೆ ರೈತರಿಗೆ ಮಾರ್ಗಸೂಚಿ

# ಬರ ನಿರ್ವಹಣೆಗೆ ತೋಟಗಾರಿಕೆ ಇಲಾಖೆ ಸಲಹೆ




**ವಿಜಯಸಾಕ್ಷಿ ಸುದ್ದಿ, ಗದಗ**

ಎಲ್ ನಿನೋ (El Ni0o) ಪರಿಣಾಮದಿಂದ ಉಂಟಾಗಿರುವ ಮಳೆ ಕೊರತೆಯನ್ನು ಎದುರಿಸಲು ತೋಟಗಾರಿಕೆ ಬೆಳೆಗಳಲ್ಲಿ ಪರ್ಯಾಯ ಬೆಳೆ ಆಯ್ಕೆ ಹಾಗೂ ಬೆಳೆ ನಿರ್ವಹಣಾ ಕ್ರಮಗಳನ್ನು ಅನುಸರಿಸುವಂತೆ ತೋಟಗಾರಿಕೆ ಇಲಾಖೆ ರೈತರಿಗೆ ಸಲಹೆ ನೀಡಿದೆ.

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆಯ ಶಿಫಾರಸಿನಂತೆ ಜುಲೈ ಎರಡನೇ ಅಥವಾ ಮೂರನೇ ವಾರದಲ್ಲಿ ಮಳೆಯಾದರೆ ಅಲ್ಪಾವಧಿಯ ಭೀಮಾ ರೆಡ್ ಈರುಳ್ಳಿ ತಳಿಯನ್ನು ನಾಟಿ ಮಾಡಬಹುದು. ಮೆಣಸಿನಕಾಯಿಗೆ ಕೃಷ್ಣಪ್ರಭಾ ಹಾಗೂ ರುದ್ರ ತಳಿಗಳ ಸಸಿಗಳನ್ನು ಬೆಳೆಸಲು ಸೂಚಿಸಲಾಗಿದೆ.

ಆಗಸ್ಟ್ ಮೊದಲ ವಾರದಲ್ಲಿ ಮಳೆಯಾದರೆ ಅಜ್ವೈನ್, ಚೌಲಿಕಾಯಿ, ಸೋಯಾಬೀನ್, ಅಲಸಂದಿ, ಹುರುಳಿ ಸೇರಿದಂತೆ ಕಡಿಮೆ ಅವಧಿಯ ಬೆಳೆಗಳನ್ನು ಬೆಳೆಯಬಹುದು. ಸೀಮಿತ ನೀರಿನ ಲಭ್ಯತೆ ಇರುವ ರೈತರು ಬೆಂಡೆಕಾಯಿ, ಬದನೆ, ಸೌತೆಕಾಯಿ, ಹೀರೇಕಾಯಿ ಹಾಗೂ ಹಾಗಲಕಾಯಿ ಬೆಳೆಗಳನ್ನು ಆಯ್ಕೆ ಮಾಡಬಹುದು.

ಬಿತ್ತನೆಗೂ ಮುನ್ನ ಅಲ್ಪಾವಧಿ ತಳಿಗಳ ಆಯ್ಕೆ, ಸಸಿ ಮಡಿಗಳಲ್ಲಿ ಸಸಿ ತಯಾರಿಕೆ, ತೇವಾಂಶ ಸಂರಕ್ಷಣೆ, ಕಾಂಟೂರ್ ಟ್ರೆಂಚ್ ನಿರ್ಮಾಣ, ಪ್ಲಾಸ್ಟಿಕ್ ಮಲ್ಚಿಂಗ್ ಹಾಗೂ ಹನಿ ನೀರಾವರಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಲಾಗಿದೆ.

ಈಗಾಗಲೇ ಬೆಳೆದಿರುವ ಈರುಳ್ಳಿ, ಮೆಣಸಿನಕಾಯಿ ಸೇರಿದಂತೆ ತೋಟಗಾರಿಕೆ ಬೆಳೆಗಳಲ್ಲಿ ಅಂತರ ಬೇಸಾಯ, ಕಳೆ ನಿಯಂತ್ರಣ, ಅಗತ್ಯವಿದ್ದರೆ ಸಸಿಗಳನ್ನು ವಿರಳಗೊಳಿಸುವುದು, ಹನಿ ನೀರಾವರಿಯಲ್ಲಿ ಸಾಲು ಬಿಟ್ಟು ಸಾಲಿಗೆ ನೀರುಣಿಸುವುದು ಹಾಗೂ ಪೊಟ್ಯಾಷಿಯಂ ನೈಟ್ರೇಟ್ ಅಥವಾ ಟ್ರೈಕಾಂಟಿನಾಲ್ ಸಿಂಪಡಣೆ ಮಾಡುವಂತೆ ಸೂಚಿಸಲಾಗಿದೆ.

ಕಾಲಕಾಲಕ್ಕೆ ಈ ಕ್ರಮಗಳನ್ನು ಅನುಸರಿಸಿದರೆ ಬರದ ಪರಿಣಾಮವನ್ನು ಕಡಿಮೆ ಮಾಡಿ ತೋಟಗಾರಿಕೆ ಬೆಳೆಗಳನ್ನು ಸಂರಕ್ಷಿಸಬಹುದು ಎಂದು ತೋಟಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬರದಲ್ಲಿ ಹಣ್ಣಿನ ತೋಟಗಳ ರಕ್ಷಣೆ ಹೇಗೆ?

1. ದಟ್ಟವಾಗಿ ಬೆಳೆದ ಕೊಂಬೆಗಳನ್ನು ಕತ್ತರಿಸಿ ಚಾಟಣಿ ಮಾಡಬೇಕು.
2. ಹೊಸದಾಗಿ ನೆಟ್ಟ ಗಿಡಗಳಿಗೆ ನೆರಳು ಒದಗಿಸಬೇಕು.
3. ದಾಳಿಂಬೆ, ಲಿಂಬೆ ಬೆಳೆಗಳಲ್ಲಿ ನೀರು ಕಾಂಡಗಳನ್ನು ತೆಗೆಯಬೇಕು.
4. ಬಾಳೆಯಲ್ಲಿ ಮರಿಗಳ ಸಂಖ್ಯೆಯನ್ನು ನಿಯಂತ್ರಿಸಬೇಕು.
5. ಭೂ ಹೊದಿಕೆ ಬೆಳೆ ಬೆಳೆಸಿ ತೇವಾಂಶ ಕಾಪಾಡಬೇಕು.
6. ತೆಂಗು, ಅಡಿಕೆಗೆ ಸಾವಯವ ಗೊಬ್ಬರ ಹಾಗೂ ಬೇವಿನ ಹಿಂಡಿ ನೀಡಬೇಕು.
7. ಅಗತ್ಯವಿದ್ದರೆ ಹೈಡ್ರೋಜೆಲ್ ಅಥವಾ ಬಯೋಚಾರ ಬಳಕೆ ಮಾಡಬಹುದು.

## ಬೆಳೆ ವಿಮೆ ಕಡ್ಡಾಯ;

### ರೈತರಿಗೆ ಕೃಷಿ ಇಲಾಖೆ ಸೂಚನೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

2026-27ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಬೆಳೆ ಸಾಲ ಪಡೆದ ರೈತರು ಕಡ್ಡಾಯವಾಗಿ ಸಂಬಂಧಿತ ಬ್ಯಾಂಕ್‌ನಲ್ಲೇ ಬೆಳೆ ವಿಮೆ ಮಾಡಿಸಬೇಕು ಎಂದು ಕೃಷಿ ಇಲಾಖೆ ತಿಳಿಸಿದೆ. ಬೆಳೆ ಸಾಲ ಪಡೆಯದ ರೈತರು ಬೆಳೆ ಸಾಲ ಪಡೆದಿಲ್ಲ ಎಂಬ ಘೋಷಣೆಯೊಂದಿಗೆ ಗ್ರಾಮ ಒನ್ ಅಥವಾ ಕಾಮನ್ ಸರ್ವಿಸ್ ಸೆಂಟರ್‌ಗಳಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಸಮೀಪದ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಅಥವಾ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸುವಂತೆ ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# 11 ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಚಾಲನೆ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೆ ಸ್ಥಗಿತಗೊಂಡಿರುವ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕಿನ 11 ಸಹಕಾರ ಸಂಘಗಳ ನೋಂದಣಿ ರದ್ದುಗೊಳಿಸುವ ಪ್ರಕ್ರಿಯೆಯನ್ನು ಸಹಕಾರ ಇಲಾಖೆ ಆರಂಭಿಸಿದೆ.

ಸಂಘಗಳಿಗೆ ಸಂಬಂಧಿಸಿದ ಯಾವುದೇ ಹಕ್ಕು ಅಥವಾ ಹಣಕಾಸು ವ್ಯವಹಾರಗಳಿದ್ದರೆ, ಸಂಬಂಧಪಟ್ಟವರು ಏಳು ದಿನಗಳೊಳಗೆ ಆಕ್ಷೇಪಣೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಉದ್ದೇಶಿತ ಕಾರ್ಯಚಟುವಟಿಕೆಗಳನ್ನು ನಡೆಸದೆ ಹಲವು ವರ್ಷಗಳಿಂದ ನಿಷ್ಕ್ರಿಯವಾಗಿರುವ ಕಾರಣ ಈ ಸಂಘಗಳನ್ನು ಸಮಾಪನೆಗೊಳಿಸಿ, ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿದ್ದಾರೆ. ಜೊತೆಗೆ ಸಮಾಪನಾಧಿಕಾರಿಯನ್ನು ನೇಮಿಸಿ ಮುಂದಿನ ಪ್ರಕ್ರಿಯೆ ಆರಂಭಿಸಲಾಗಿದೆ.

ಸಮಾಪನೆಗೊಂಡಿರುವ ಬಹುತೇಕ ಸಂಘಗಳು ತಮ್ಮ ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅಲ್ಲದೆ, ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಾಹಕರ ಮಾಹಿತಿ ಲಭ್ಯವಿಲ್ಲ. ಸಂಘಗಳಿಗೆ ಸಂಬಂಧಿಸಿದಂತೆ ಯಾರಿಗಾದರೂ ಹಣ ಪಾವತಿಸಬೇಕಿದ್ದರೂ ಅಥವಾ ಸಂಘದಿಂದ ಹಣ ಪಡೆಯಬೇಕಿದ್ದರೂ, ಅಗತ್ಯ ದಾಖಲೆಗಳೊಂದಿಗೆ ಪ್ರಕಟಣೆ ಹೊರಡಿಸಿದ ದಿನಾಂಕದಿಂದ ಏಳು ದಿನಗಳೊಳಗೆ ಶಿರಹಟ್ಟಿ ಸಹಕಾರ ಅಭಿವೃದ್ಧಿ ಅಧಿಕಾರಿ ಹಾಗೂ ಗದಗ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯನ್ನು ಸಂಪರ್ಕಿಸಿ ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ಸಂಘಗಳ ಆಸ್ತಿಪಾಸ್ತಿಗಳನ್ನು ನಿಯಮಾನುಸಾರ ಶೂನ್ಯಗೊಳಿಸಿ ನೋಂದಣಿ ರದ್ದುಗೊಳಿಸುವ ಕ್ರಮ ಕೈಗೊಳ್ಳಲಾಗುವುದು. ಬಳಿಕ ಸಲ್ಲಿಕೆಯಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಶಿರಹಟ್ಟಿ ಸಹಕಾರ ಅಭಿವೃದ್ಧಿ ಸಮಾಪನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರದ್ದತಿ ಪ್ರಕ್ರಿಯೆಯಲ್ಲಿರುವ ಸಂಘಗಳು

ಬನಶಂಕರಿ ಅರ್ಬನ್ ಕೋ-ಆಫ್ ಕ್ರೆಡಿಟ್ ಸಂಘ (ಶಿಗ್ಲಿ), ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ (ಹುಲ್ಲೂರು), ಶ್ರೀ ಲಿಂಗರಾಜ ಪತ್ತಿನ ಸಹಕಾರ ಸಂಘ (ಲಕ್ಷ್ಮೇಶ್ವರ), ನವೋದಯ ವಿದ್ಯುತ್ ಮಗ್ಗ ನೇಕಾರರ ಜವಳಿ ಉತ್ಪಾದಕರ ಸಹಕಾರ ಸಂಘ (ಶಿಗ್ಲಿ), ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ (ಬೆಳ್ಳಿಗಟ್ಟಿ), ಪಂಡಿತ ಪುಟ್ಟರಾಜ ಹಿಂದುಳಿದ ವರ್ಗಗಳ ವಿವಿಧೋದ್ದೇಶಗಳ ಸಹಕಾರ ಸಂಘ (ಬೆಳ್ಳಟ್ಟಿ), ಶ್ರೀ ಜ್ಞಾನೇಶ್ವರ ದರ್ಜಿಗಳ ಸಹಕಾರ ಸಂಘ (ಶಿಗ್ಲಿ), ಚರ್ಮೋದ್ಯೋಗ ಕೈಗಾರಿಕಾ ಸಹಕಾರ ಸಂಘ (ಶಿರಹಟ್ಟಿ), ಮಾಡಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘ (ಮಾಡಳ್ಳಿ), ನಂದನ ಪತ್ತಿನ ಸಹಕಾರ ಸಂಘ (ಶಿರಹಟ್ಟಿ) ಹಾಗೂ ಭಾರತ ಕೋ-ಆಫ್ ಕ್ರೆಡಿಟ್ ಸೊಸೈಟಿ (ಶಿರಹಟ್ಟಿ).

# ಪ್ರಯಾಣಿಕರಿಗೆ ಶುದ್ಧ ನೀರಿನ ಸೌಲಭ್ಯ



**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಸಾರ್ವಜನಿಕ ಪ್ರಯಾಣಿಕರಿಗೆ ಶುದ್ಧ ಕುಡಿಯುವ ನೀರು ಸುಲಭವಾಗಿ ದೊರೆಯುವ ಉದ್ದೇಶದಿಂದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ವಾಕರಸಾ)ಯ ಹುಬ್ಬಳ್ಳಿ ನಗರ ಮತ್ತು ಉಪನಗರ ಬಸ್ ನಿಲ್ದಾಣ ಹಾಗೂ ಸಿಟಿ ಬಸ್ ಟರ್ಮಿನಲ್ (CBT) ನಲ್ಲಿ ಶುದ್ಧ ಕುಡಿಯುವ ನೀರಿನ ಆರ್‌ಓ ಘಟಕಗಳನ್ನು ಬುಧವಾರ ಉದ್ಘಾಟಿಸಲಾಯಿತು.

ಇನ್ಫೋಸಿಸ್ ಫೌಂಡೇಶನ್‌ನ ಸಿಎಸ್‌ಆರ್ (CSR) ಯೋಜನೆಯಡಿ ಅಳವಡಿಸಲಾದ ಈ ಘಟಕಗಳನ್ನು ವಾಕರಸಾ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗಾ ಎಂ. (ಐಎಎಸ್) ಉದ್ಘಾಟಿಸಿ ಸಾರ್ವಜನಿಕರಿಗೆ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಇನ್ಫೋಸಿಸ್ ಲಿಮಿಟೆಡ್ ಹುಬ್ಬಳ್ಳಿ ಕೇಂದ್ರದ ಮುಖ್ಯಸ್ಥ ಅಲ್ಲಾಬಕ್ಷ ಅಸಾದುಲ್ಲಾ, ಹಿರಿಯ ತಾಂತ್ರಿಕ ವ್ಯವಸ್ಥಾಪಕ ಶಿವಾನಂದ ಕೂಡ್ಲಮಠ, ಮುಖ್ಯ ಸಂಚಾರ ವ್ಯವಸ್ಥಾಪಕ ವಿವೇಕಾನಂದ ವಿಶ್ವಜ್ಞ, ಮುಖ್ಯ ಕಾಮಗಾರಿ ಅಭಿಯಂತರ ದಿವಾಕರ ಯರಗೊಪ್ಪ, ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ ಬಾಗಬಾನ್, ಹೆಚ್. ರಾಮನಗೌಡರ, ರವಿ ಅಂಚಿಗಾವಿ, ನವೀನಕುಮಾರ ತಿಪ್ಪಾ, ಸಂಗಮೇಶ ಮಟೋಳಿ ಸೇರಿದಂತೆ ಸಂಸ್ಥೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಸಾರ್ವಜನಿಕ ಸಂಪರ್ಕಾಧಿಕಾರಿ ನವೀನಕುಮಾರ ತಿಪ್ಪಾ ನಿರೂಪಿಸಿದರು. ಪ್ರಯಾಣಿಕರು ಈ ಶುದ್ಧ ಕುಡಿಯುವ ನೀರಿನ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಪ್ರಕಟಣೆಯಲ್ಲಿ ಮನವಿ ಮಾಡಿದೆ.

## ಶಿಗ್ಲಿದೊಡ್ಡೂರ ರಸ್ತೆಯ ದುಸ್ಥಿತಿ | ಮತ್ತೊಂದು ದುರಂತಕ್ಕೂ ಮುನ್ನ ಕಾಮಗಾರಿ ಪೂರ್ಣಗೊಳಿಸುವಂತೆ ಆಗ್ರಹ

# ಅರ್ಧಕ್ಕೆ ನಿಂತ ಸೇತುವೆ ಕಾಮಗಾರಿ..!



**ಪರ್ಯಾಯ ಕಚ್ಚಾ ರಸ್ತೆ ಸಂಪೂರ್ಣ ಹಾಳಾಗಿದ್ದು, ಶಾಲಾ ಮಕ್ಕಳು, ರೈತರು ಹಾಗೂ ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಅಧಿಕಾರಿಗಳು ಮತ್ತು ಗುತ್ತಿಗೆದಾರರು ಕೂಡಲೇ ಕಾಮಗಾರಿ ಪೂರ್ಣಗೊಳಿಸಬೇಕು.**

**– ಫಕ್ಕಿರೇಶ ಮ್ಯಾಟಣ್ಣವರ,** ಬಾಲೆಹೊಸೂರು

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿಗ್ಲಿದೊಡ್ಡೂರ ರಸ್ತೆಯ ಮಧ್ಯೆ ನಿರ್ಮಾಣವಾಗುತ್ತಿರುವ ಕಿರು ಸೇತುವೆ ಕಾಮಗಾರಿ ವಿಳಂಬವಾಗಿರುವ ಪರಿಣಾಮ ಸಾರ್ವಜನಿಕರು ಜೀವಭಯದಲ್ಲೇ ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಾಮಗಾರಿಗಾಗಿ ನಿರ್ಮಿಸಿರುವ ತಾತ್ಕಾಲಿಕ ಕಚ್ಚಾ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಪ್ರತಿದಿನ ವಾಹನ ಸವಾರರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ.

ಲಕ್ಷ್ಮೇಶ್ವರದಿಂದ ಶಿಗ್ಲಿ, ಸೂರಣಗಿ, ಬಾಲೆಹೊಸೂರ ಮಾರ್ಗವಾಗಿ ಅನ್ಯ ಜಿಲ್ಲೆಗಳು ಹಾಗೂ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ಈ ಪಿಡಬ್ಲ್ಯುಡಿ ರಸ್ತೆ ಪ್ರಮುಖ ಸಂಚಾರ ಮಾರ್ಗವಾಗಿದೆ.

ಲಕ್ಷ್ಮೇಶ್ವರದೊಡ್ಡೂರ ರಸ್ತೆ ಹಾಳಾಗಿರುವ ಕಾರಣ ಹೆಚ್ಚಿನ ವಾಹನಗಳು ಇದೇ ಮಾರ್ಗವನ್ನು ಅವಲಂಬಿಸಿವೆ. ಪ್ರತಿನಿತ್ಯ ನೂರಾರು ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ಸರಕು ಸಾಗಣೆ ವಾಹನಗಳು ಇದೇ ರಸ್ತೆಯಲ್ಲಿ ಸಂಚರಿಸುತ್ತಿವೆ. ಸೇತುವೆ ಕಾಮಗಾರಿಗಾಗಿ ನಿರ್ಮಿಸಿರುವ ಪರ್ಯಾಯ ಕಚ್ಚಾ ರಸ್ತೆಯಲ್ಲಿ ಮರಳು, ಖಡಿ, ಎಂ-ಸ್ಯಾಂಡ್ ಮತ್ತು ಮಣ್ಣನ್ನು ಹೊತ್ತ ಓವರ್ ಲೋಡ್ ಲಾರಿಗಳ ನಿರಂತರ ಓಡಾಟದಿಂದ ರಸ್ತೆ ಸಂಪೂರ್ಣ ಹಾಳಾಗಿದೆ. ಪರಿಣಾಮ ವಾಹನಗಳು ಗುಂಡಿ-ಗುಂಡಿಗಳಲ್ಲಿ ಎದ್ದುಬಿದ್ದು ಸಾಗುತ್ತಿವೆ. ಮಳೆ ಬಂದರೆ ರಸ್ತೆ ಕೆಸರುಮಯವಾಗಿ ವಾಹನಗಳು ಸಿಲುಕಿಕೊಳ್ಳುತ್ತಿದ್ದು, ಕೆಲವೊಮ್ಮೆ ಗಂಟೆಗಟ್ಟಲೆ ಸಂಚಾರ ಸ್ಥಗಿತಗೊಳ್ಳುವ ಪರಿಸ್ಥಿತಿ ಎದುರಾಗುತ್ತಿದೆ.

ಇತ್ತೀಚೆಗೆ ಇದೇ ರಸ್ತೆಯಲ್ಲಿ ಕೆಎಸ್‌ಆರ್‌ಟಿಸಿ ಬಸ್ ಕಂದಕಕ್ಕೆ ಜಾರಿ ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ 30ಕ್ಕೂ ಹೆಚ್ಚು ಪ್ರಯಾಣಿಕರು ಹಾಗೂ 15ಕ್ಕೂ ಹೆಚ್ಚು ವಿದ್ಯಾರ್ಥಿಗಳು ಗಾಯಗೊಂಡಿದ್ದರು. ಇಷ್ಟೊಂದು ಗಂಭೀರ ಅಪಘಾತ ನಡೆದಿದ್ದರೂ ಗುತ್ತಿಗೆದಾರರು, ಪಿಡಬ್ಲ್ಯುಡಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಎಚ್ಚೆತ್ತುಕೊಂಡಿಲ್ಲ ಎಂಬ ಆರೋಪ ಸಾರ್ವಜನಿಕರಿಂದ ಕೇಳಿಬರುತ್ತಿದೆ.

ಸುಮಾರು ₹25 ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಕಿರು ಸೇತುವೆ ಕಾಮಗಾರಿಗೆ ಮಾರ್ಚ್ ತಿಂಗಳಲ್ಲೇ ಕಾರ್ಯಾದೇಶ ನೀಡಲಾಗಿತ್ತು. ಇಲಾಖೆಯು ಆರು ತಿಂಗಳ ಕಾಲಾವಕಾಶ ನೀಡಿರುವುದರಿಂದ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿದೆ ಎಂಬ ಟೀಕೆ ವ್ಯಕ್ತವಾಗಿದೆ. ಸೇತುವೆ ನಿರ್ಮಾಣದ ಜೊತೆಗೆ ಪರ್ಯಾಯ ರಸ್ತೆಯನ್ನೂ ಸುಗಮವಾಗಿ ನಿರ್ವಹಿಸಬೇಕಿದ್ದರೂ ನಿರ್ಲಕ್ಷ್ಯ ವಹಿಸಿರುವುದರಿಂದ ಸಾರ್ವಜನಿಕರ ಪರದಾಟ ಹೆಚ್ಚಾಗಿದೆ.

ಸೂರಣಗಿ ಗ್ರಾಮದ ಮಾಜಿ ತಾಪಂ ಸದಸ್ಯ ಕೋಟೆಪ್ಪ ವರ್ದಿ ಹಾಗೂ ಬಾಲೆಹೊಸೂರಿನ ಫಕ್ಕಿರೇಶ ಮ್ಯಾಟಣ್ಣವರ ಮಾತನಾಡಿ, ಮತ್ತೊಂದು ಅಪಘಾತ ಸಂಭವಿಸುವ ಮೊದಲು ಸೇತುವೆ ಕಾಮಗಾರಿ ಪೂರ್ಣಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಪಿಡಬ್ಲ್ಯುಡಿ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಶಾಂತ ಹೊಸಬಾವಿ, ಕಿರು ಸೇತುವೆ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ಸೇತುವೆ ಮೇಲಿನ ರಸ್ತೆ ನಿರ್ಮಾಣ ಮಾತ್ರ ಬಾಕಿಯಿದ್ದು, ಗುತ್ತಿಗೆದಾರರಿಗೆ ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸುವಂತೆ ಸೂಚಿಸಲಾಗುವುದು ಎಂದು ತಿಳಿಸಿದ್ದಾರೆ.

# ಸಸಿ ನೆಟ್ಟರೆ ಸಾಲದು, ಸಂರಕ್ಷಿಸುವ ಹೊಣೆಗಾರಿಕೆಯೂ ಇರಲಿ




**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಸರ ಸಂರಕ್ಷಣೆ ಇಂದಿನ ಕಾಲಘಟ್ಟದ ಅತ್ಯಂತ ದೊಡ್ಡ ಅಗತ್ಯವಾಗಿದೆ. ಕೇವಲ ಸಸಿ ನೆಡುವುದಷ್ಟೇ ಸಾಧನೆಯಲ್ಲ, ನೆಟ್ಟ ಸಸಿಗಳನ್ನು ಪೋಷಿಸಿ ಬೆಳೆಸುವುದೇ ನಿಜವಾದ ಪರಿಸರ ಸೇವೆ ಎಂದು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ಹೇಳಿದರು.

ನಗರದ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಆವರಣದಲ್ಲಿ ಗದಗ-ಬೆಟಗೇರಿ ರೋಟರಿ ಕ್ಲಬ್ ವತಿಯಿಂದ ಹಮ್ಮಿಕೊಂಡಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆರೋಗ್ಯಕರ ಪರಿಸರವೇ ಮಾನವನ ಬದುಕಿನ ಮೂಲಾಧಾರವಾಗಿದೆ. ಶುದ್ಧ ಗಾಳಿ, ಶುದ್ಧ ನೀರು ಹಾಗೂ ಪೌಷ್ಟಿಕ ಆಹಾರಕ್ಕಾಗಿ ಪರಿಸರ ಸಂರಕ್ಷಣೆ ಅನಿವಾರ್ಯವಾಗಿದೆ. ಹೀಗಾಗಿ ಪ್ರತಿಯೊಬ್ಬರೂ ಪ್ರಕೃತಿ ಸಂಪನ್ಮೂಲಗಳ ರಕ್ಷಣೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಗದಗ ಶಹರ ಕ್ಷೇತ್ರ ಸಂಪನ್ಮೂಲ ಕೇಂದ್ರದ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ ಮಾತನಾಡಿ, ಪರಿಸರ ಕಾಳಜಿಯಿಂದ ರೋಟರಿ ಕ್ಲಬ್ ಕೈಗೊಂಡಿರುವ ಸಸಿ ನೆಡುವ ಅಭಿಯಾನ ಶ್ಲಾಘನೀಯವಾಗಿದ್ದು, ಇಂತಹ ಕಾರ್ಯಗಳು ಸಮಾಜದಲ್ಲಿ ಪರಿಸರ ಜಾಗೃತಿ ಮೂಡಿಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ರೋಟರಿ ಕ್ಲಬ್‌ನ ಕಾರ್ಯದರ್ಶಿ ಅಕ್ಷಯ್ ಶೆಟ್ಟಿ, ರೋಟರಿ ವೆಲ್‌ಫೇರ್ ಅಧ್ಯಕ್ಷ ಶ್ರೀಧರ ಸುಲ್ತಾನಪೂರ, ಎಸ್.ವಿ. ಕುಂಬಾರ, ಶರಣಪ್ಪ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ದೇವರು-ಧರ್ಮ ಮರೆಯದ ಬದುಕು ಮಾತ್ರ ಸಾರ್ಥಕ- ರಂಭಾಪುರಿ ಶ್ರೀಗಳ ಸಂದೇಶ

# ಭಗವಂತನಿತ್ತ ಸಂಪತ್ತೇ ಬದುಕಿನ ನಿಜವಾದ ಐಶ್ವರ್ಯ




**ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು**

ದೇಶ ಮತ್ತು ಧರ್ಮವು ಮನುಷ್ಯನ ಎರಡು ಕಣ್ಣುಗಳಾಗಿದ್ದು, ಪ್ರಗತಿಪರ ವಿಚಾರಧಾರೆಗಳ ಹೆಸರಿನಲ್ಲಿ ಭಾರತೀಯ ಆಧ್ಯಾತ್ಮಿಕ ಸಂಸ್ಕೃತಿ ನಾಶವಾಗಬಾರದು. ಭಗವಂತನಿತ್ತ ಸಂಪತ್ತೇ ಬದುಕಿನ ನಿಜವಾದ ಅಮೂಲ್ಯ ಸಂಪತ್ತು ಎಂಬುದನ್ನು ಯಾರೂ ಮರೆಯಬಾರದು ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯರು ಹೇಳಿದರು.

ಚಿಕ್ಕಮಗಳೂರು ನಗರದ ವೀರಶೈವ ಲಿಂಗಾಯತ ಸಮುದಾಯ ಭವನದ ಆವರಣದಲ್ಲಿ ನಿರ್ಮಿಸಲಾದ ಶ್ರೀ ಈಶ್ವರ ದೇವಸ್ಥಾನದ ಉದ್ಘಾಟನೆ, ಲಿಂಗ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಅಂಗವಾಗಿ ನಡೆದ ಧರ್ಮಜಾಗೃತಿ ಸಮಾರಂಭದಲ್ಲಿ ಆಶೀರ್ವಚನ ನೀಡಿದ ಅವರು, ದೇವರು ಮತ್ತು ಧರ್ಮವನ್ನು ಮರೆಯದ ಬದುಕೇ ಶಾಶ್ವತ ನೆಮ್ಮದಿಯ ಬದುಕು ಎಂದರು.

ದೇವರ ಮೇಲಿನ ನಂಬಿಕೆ ಮನುಷ್ಯನ ಬದುಕಿಗೆ ನಂದಾದೀಪವಾಗಿದ್ದು, ದೇವರು ಎಲ್ಲರಲ್ಲೂ ಇದ್ದರೂ ದೇವರಲ್ಲಿ ಎಲ್ಲರೂ ಇರುವುದಿಲ್ಲ. ಮಾನವ ಪರಿಪೂರ್ಣತೆಯತ್ತ ಸಾಗುವುದೇ ನಿಜವಾದ ಧರ್ಮ ಎಂಬುದನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಅಖಂಡತೆಗೆ ಇರುವ ಬೆಲೆ ಒಡಕಿಗೆ ಸಿಗುವುದಿಲ್ಲ ಎಂಬ ಸತ್ಯವನ್ನು ಪ್ರತಿಯೊಬ್ಬರೂ ಅರಿಯಬೇಕು ಎಂದು ತಿಳಿಸಿದರು.

ನಗರದಲ್ಲಿ ನಿರ್ಮಾಣಗೊಂಡಿರುವ ಶ್ರೀಮತಿ ಮೈತ್ರಾದೇವಿಬಿ.ಎಸ್. ಯಡಿಯೂರಪ್ಪ ವೀರಶೈವ ಲಿಂಗಾಯತ ಭವನ ಸಮಾಜದ ಐಕ್ಯತೆಯ ಪ್ರತೀಕವಾಗಿದೆ. ಇದರ ನಿರ್ಮಾಣಕ್ಕೆ ಸಹಕರಿಸಿದ ಶಿವಮೊಗ್ಗ ಸಂಸದ ಬಿ.ವೈ. ರಾಘವೇಂದ್ರ ಸೇರಿದಂತೆ ಎಲ್ಲ ಸಮಾಜಬಾಂಧವರ ಸೇವೆ ಶ್ಲಾಘನೀಯ ಎಂದು ಜಗದ್ಗುರುಗಳು ಮೆಚ್ಚುಗೆ ವ್ಯಕ್ತಪಡಿಸಿದರು.

**ದೇವರ ಮೇಲಿನ ನಂಬಿಕೆ ಬದುಕಿನ ಶಾಶ್ವತ ನಂದಾದೀಪ; ಭಗವಂತನಿತ್ತ ಸಂಪತ್ತೇ ನಿಜವಾದ ಐಶ್ವರ್ಯ.**


**– ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಶಿವಾಚಾರ್ಯರು**

ಕಾರ್ಯಕ್ರಮವನ್ನು ಉದ್ಘಾಟಿಸಿದ ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ, ಪರಿಪಕ್ವ ಸಮಾಜ ನಿರ್ಮಾಣವೇ ನಿಜವಾದ ಧರ್ಮ. ಸಮಾಜದ ಸಂಘಟಿತ ಪ್ರಯತ್ನದಿಂದ ನಿರ್ಮಾಣಗೊಂಡ ಈ ಭವನ ಇತರರಿಗೆ ಮಾದರಿಯಾಗಿದೆ ಎಂದು ಹೇಳಿದರು.

ಚಿಕ್ಕಮಗಳೂರು ಶಾಸಕ ಹೆಚ್.ಡಿ. ತಮ್ಮಯ್ಯ ಮಾತನಾಡಿ, ನಗರಕ್ಕೆ ಈ ಭವ್ಯ ಭವನ ಮತ್ತು ದೇವಸ್ಥಾನ ಹೊಸ ಕಳಸವಿಟ್ಟಂತಾಗಿದೆ. ಸಮಾಜವನ್ನು ಒಗ್ಗೂಡಿಸುವ ಕಾರ್ಯಕ್ಕೆ ಧಾರ್ಮಿಕ ಕೇಂದ್ರಗಳು ಪೂರಕವಾಗಿವೆ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಂ.ಎಲ್. ಮೂರ್ತಿ ಹಾಗೂ ದೇವಸ್ಥಾನದ ದಾನಿಗಳಾದ ಸಂಗೀತಾಎಸ್.ಬಿ. ತಿಪ್ಪಾರೆಡ್ಡಿ ಕುಟುಂಬವನ್ನು ಸನ್ಮಾನಿಸಲಾಯಿತು. ವಿವಿಧ ಮಠಾಧೀಶರು, ಸಮಾಜದ ಮುಖಂಡರು ಹಾಗೂ ನೂರಾರು ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಇಂದು ಗದಗಕ್ಕೆ ಸಮಾಜಸೇವಕಿ ವಿರಾಜ್ ಕೋಟಕ್ ಭೇಟಿ

# ಇಂದು ನಗರಕ್ಕಾಗಮಿಸುವ ಗಣ್ಯರು



**ವಿಜಯಸಾಕ್ಷಿ ಸುದ್ದಿ, ಗದಗ**

ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿಯ 53ನೇ ಸೇವಾ ದೀಕ್ಷಾ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭಕ್ಕೆ ಹಾವೇರಿಯ ಸಮಾಜಸೇವಕಿ ಹಾಗೂ ಇನ್ನರ್‌ವ್ಹೀಲ್ ಜಿಲ್ಲಾ ನಾಯಕಿ ಶ್ರೀಮತಿ ವಿರಾಜ್ ಕೋಟಕ್ ಅವರು ಇಂದು ನಗರಕ್ಕೆ ಆಗಮಿಸಲಿದ್ದಾರೆ.

ಶ್ರೀಮತಿ ವಿರಾಜ್ ಕೋಟಕ್ ಅವರು 1996ರಲ್ಲಿ ಇನ್ನರ್‌ವ್ಹೀಲ್ ಕ್ಲಬ್ ಆಫ್ ಹಾವೇರಿಗೆ ಸೇರ್ಪಡೆಯಾಗಿ, ಅಧ್ಯಕ್ಷೆ, ಜಿಲ್ಲಾ ಸಂಪಾದಕಿ, ಜಿಲ್ಲಾ ಕಾರ್ಯದರ್ಶಿ, ಜಿಲ್ಲಾ ಖಜಾಂಚಿ ಸೇರಿದಂತೆ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ದಿಶಾ, ಮೈತ್ರಿ ಸೇರಿದಂತೆ ಹಲವು ಸಮಾಜಮುಖಿ ಯೋಜನೆಗಳ ಮೂಲಕ ಸಾವಿರಾರು ಮಕ್ಕಳಿಗೆ ಶೈಕ್ಷಣಿಕ ಹಾಗೂ ಸಾಮಾಜಿಕ ನೆರವು ನೀಡುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ.

ಹಾವೇರಿಯ ಸರ್ಕಾರಿ ಶಾಲೆಗಳ ಅಭಿವೃದ್ಧಿ, ವಿದ್ಯಾರ್ಥಿನಿಯರಿಗೆ ಸೈಕಲ್ ವಿತರಣೆ, ಮಹಿಳಾ ಸಬಲೀಕರಣ, ಕಿಶೋರಿಯರ ಆರೋಗ್ಯ ಜಾಗೃತಿ ಸೇರಿದಂತೆ ಅನೇಕ ಸೇವಾ ಕಾರ್ಯಗಳ ಮೂಲಕ ಅವರು ಗುರುತಿಸಿಕೊಂಡಿದ್ದಾರೆ. ಜ್ಯೋತಿ ಮಹಿಳಾ ಮಂಡಳದ ಸಂಸ್ಥಾಪಕ ಅಧ್ಯಕ್ಷೆ, ಪ್ರಿಯದರ್ಶಿನಿ ಮಹಿಳಾ ಬ್ಯಾಂಕ್‌ನ ಪ್ರವರ್ತಕ ನಿರ್ದೇಶಕಿ ಹಾಗೂ ಜಾಗೃತಿ ಲೇಡೀಸ್ ಅಸೋಸಿಯೇಷನ್ ಅಧ್ಯಕ್ಷೆಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಪ್ರಸ್ತುತ ರೋಟರಿ ಕ್ಲಬ್ ಆಫ್ ಹುಬ್ಬಳ್ಳಿ ಸೆಂಟ್ರಲ್ ಸದಸ್ಯೆಯೂ ಆಗಿರುವ ವಿರಾಜ್ ಕೋಟಕ್ ಅವರು, ವಿವಿಧ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಇನ್ನರ್‌ವ್ಹೀಲ್ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸಂಘಟನಾ ಕೌಶಲ್ಯಕ್ಕೆ ಮೆಚ್ಚುಗೆ ಪಡೆದಿದ್ದಾರೆ.

ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಆಯೋಜಿಸಿರುವ ಪದಗ್ರಹಣ ಸಮಾರಂಭದಲ್ಲಿ ಅವರು ಇನ್ಸ್ಟಾಲಿಂಗ್ ಆಫೀಸರ್ ಆಗಿ ಭಾಗವಹಿಸಲಿದ್ದು, ಗದಗ ಜಿಲ್ಲೆಗೆ ಆಗಮಿಸುತ್ತಿರುವ ಅವರನ್ನು ಕ್ಲಬ್ ವತಿಯಿಂದ ಆತ್ಮೀಯವಾಗಿ ಸ್ವಾಗತಿಸಲಾಗಿದೆ.

# ಧನಾತ್ಮಕ ಚಿಂತನೆಯೇ ಯಶಸ್ಸಿನ ಮೊದಲ ಮೆಟ್ಟಿಲು

**ವಿಜಯಸಾಕ್ಷಿ ಸುದ್ದಿ, ಗದಗ**

ವ್ಯಕ್ತಿ ಯಾವುದೇ ಹಿನ್ನೆಲೆಯಿಂದ ಬಂದಿರಲಿ, ದೌರ್ಬಲ್ಯಗಳನ್ನು ಮೀರಿ ಸಾಧಿಸಬೇಕೆಂಬ ಧನಾತ್ಮಕ ಮನೋಭಾವ ಬೆಳೆಸಿಕೊಂಡರೆ ಯಶಸ್ಸು ಖಚಿತ. ಧನಾತ್ಮಕ ಚಿಂತನೆಯೇ ಉನ್ನತ ಸಾಧನೆಗೆ ಬುನಾದಿಯಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರು ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಹೇಳಿದರು.

ನಗರದ ಆರ್ಯಭಟ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಟಿಹೊಸ ಹೆಜ್ಜೆ2026ಟಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಹಾಗೂ ವಿದ್ಯಾರ್ಥಿ ಸಂಸತ್ ಉದ್ಘಾಟನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಿಯುಸಿ ಹಂತವು ವಿದ್ಯಾರ್ಥಿಗಳ ಬದುಕಿನ ನಿರ್ಣಾಯಕ ಘಟ್ಟವಾಗಿದ್ದು, ಈ ಅವಧಿಯಲ್ಲಿ ಏಕಾಗ್ರತೆ, ಸಮಯದ ಸದ್ಬಳಕೆ ಹಾಗೂ ಸ್ಪಷ್ಟ ಗುರಿಯೊಂದಿಗೆ ಮುನ್ನಡೆಯಬೇಕು. ವಿದ್ಯಾರ್ಥಿಗಳು ಉಪನ್ಯಾಸಕರಿಗೆ ಗೌರವ ನೀಡಬೇಕು. ಪಾಲಕರಷ್ಟೇ ವಿದ್ಯಾರ್ಥಿಗಳ ಯಶಸ್ಸಿನಲ್ಲಿ ಸಂತೋಷಪಡುವವರು ಉಪನ್ಯಾಸಕರೂ ಆಗಿದ್ದಾರೆ ಎಂದು ಹೇಳಿದರು.




ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೆ.ಎಲ್.ಇ. ಸಂಸ್ಥೆಯ ಜೆ.ಟಿ. ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಎಸ್.ಬಿ. ಹಾವೇರಿ ಮಾತನಾಡಿ, ಆರ್ಯಭಟ ಕಾಲೇಜಿನ ವಿದ್ಯಾರ್ಥಿಗಳ ಪ್ರತಿಭೆ ಮತ್ತು ಆತ್ಮವಿಶ್ವಾಸ ಶ್ಲಾಘನೀಯ. ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರಂತೆ ದೊಡ್ಡ ಕನಸುಗಳನ್ನು ಕಾಣಬೇಕು. ಪರಿಶ್ರಮ ಮತ್ತು ನಿರಂತರ ಪ್ರಯತ್ನದಿಂದ ಯಾವುದೇ ಗುರಿ ಸಾಧಿಸಬಹುದು ಎಂದು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದರು.

ಐ.ಪಿ.ಇ.ಟಿ. ಸಂಸ್ಥೆಯ ಖಜಾಂಚಿ ಅಮೃತಾ ಹಸರಡ್ಡಿ ಹಾಗೂ ಕಾಲೇಜಿನ ಪ್ರಾಚಾರ್ಯ ಸಂಗಮೇಶ ಸಿ.ಕೆ. ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಶರಣ್ ರಡ್ಡೇರ ಹಾಗೂ ಪಿ.ಪಿ.ಜಿ. ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ವೀರೇಶ ಹಿತ್ತಲಮನಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ 2026-27ನೇ ಸಾಲಿನ ವಿದ್ಯಾರ್ಥಿ ಪ್ರತಿನಿಧಿಗಳು ಪ್ರಮಾಣವಚನ ಸ್ವೀಕರಿಸಿದರು. ವಿದ್ಯಾರ್ಥಿಗಳಿಂದ ನೃತ್ಯ, ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

ಕಾರ್ಯಕ್ರಮದಲ್ಲಿ ಉಪಪ್ರಾಚಾರ್ಯ ಪ್ರಶಾಂತಕುಮಾರ ದೊಡ್ಡಮನಿ, ಉಪನ್ಯಾಸಕರಾದ ಮಧುಸೂಧನ ಬೆಟದೂರ, ಚಿದಾನಂದಪ್ಪ ಕೊಪ್ಪಳ, ಅರುಣ್ ಶಿರೋಳ, ಪಂಚಾಕ್ಷರಿ ಹೂಗಾರ, ಮಿಸ್ಬಾ ಶಿರಹಟ್ಟಿ, ಪರ್ವೀನ್‌ಬಾನು ಮಲಬಾರಿ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಇಷ್ಟಪಟ್ಟು ಓದಿದರೆ ಯಶಸ್ಸು ನಿಮ್ಮದೇ

## ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ನಾಲ್ಕು ಶಾಲೆಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿಗಳು ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಪುಸ್ತಕದಲ್ಲಿರುವ ಜ್ಞಾನವನ್ನು ಮಸ್ತಕದಲ್ಲಿ ತುಂಬಿಕೊಂಡು ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದರೆ ಜೀವನದಲ್ಲಿ ಯಶಸ್ಸು ಖಚಿತ ಎಂದು ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಹಿರಿಯ ಟ್ರಸ್ಟಿ ಶಿವಾನಂದ ಕಟ್ಟಿ ಹೇಳಿದರು.

ಗದಗ ತಾಲೂಕಿನ ಅಂತೂರ-ಬೆಂತೂರ ಗ್ರಾಮದ ಕೃ.ವೆಂ. ಪಾಟೀಲ ಸರ್ಕಾರಿ ಪ್ರೌಢಶಾಲೆಯಲ್ಲಿ ಪ್ರತಿಷ್ಠಾನದ ವತಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಐದು ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ, ಅಭಿನಂದನಾ ಪತ್ರ, ಕಾಲೇಜು ಬ್ಯಾಗ್ ಹಾಗೂ ಸಿಹಿ ಪೊಟ್ಟಣ ನೀಡಿ ಪ್ರತಿಭಾ ಪುರಸ್ಕಾರ ಪ್ರದಾನಿಸಿ ಅವರು ಮಾತನಾಡಿದರು.

ಕಲಿಯುವ ವಯಸ್ಸಿನಲ್ಲಿ ವಿದ್ಯಾರ್ಥಿಗಳು ಶಿಕ್ಷಣಕ್ಕೇ ಹೆಚ್ಚಿನ ಆದ್ಯತೆ ನೀಡಬೇಕು. ಸಮಯ ವ್ಯರ್ಥ ಮಾಡುವ ಅಭ್ಯಾಸ ಹಾಗೂ ದುಶ್ಚಟಗಳಿಂದ ದೂರವಿರಬೇಕು. ಮೊಬೈಲ್ ಮತ್ತು ದೂರದರ್ಶನವನ್ನು ಅಗತ್ಯಕ್ಕೆ ತಕ್ಕಂತೆ, ಜ್ಞಾನಾರ್ಜನೆಗಾಗಿ ಮಾತ್ರ ಬಳಸಬೇಕು ಎಂದು ಸಲಹೆ ನೀಡಿದರು.

ಅಂತೂರ-ಬೆಂತೂರ ಶಾಲೆಯ ಮೇಘಾ ಮಜ್ಜಿಗುಡ್ಡ, ದ್ರಾಕ್ಷಾಯಣಿ ಕುರುಬರ, ಸಾವಿತ್ರಿ ಕಳ್ಳಿಮನಿ, ಸಿಂಧು ಗಾಣಿಗೇರ ಹಾಗೂ ಸಹನಾ ಬಾರಕೇರ ಅವರನ್ನು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಸಮಾರಂಭದ ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯ ಎಸ್.ಬಿ. ದೊಡ್ಡಣ್ಣವರ ವಹಿಸಿದ್ದರು. ಇದೇ ವೇಳೆ ಶ್ಯಾಗೋಟಿ, ಹುಲಕೋಟಿ ಹಾಗೂ ಬೆಳಹೋಡ ಸರ್ಕಾರಿ ಪ್ರೌಢಶಾಲೆಗಳ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೂ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಶ್ಯಾಗೋಟಿಯಲ್ಲಿ ಅಕ್ಷತಾ ಪಾಟೀಲ, ಸಹನಾ ಕೊನೆಸಾಗರ, ವೈಷ್ಣವಿ ಗೊರವರ, ಸೌಂದರ್ಯ ಸಕ್ರಣ್ಣವರ ಹಾಗೂ ಗಂಗವ್ವ ದೊಡ್ಡಮನಿ, ಹುಲಕೋಟಿಯಲ್ಲಿ ಸೃಷ್ಟಿ ದಿಂಡೂರ, ಸುನೀತಾ ಹಾಲನವರ, ದಾವಲಬಿ ಸುಂಕದ, ಸ್ಮಿತಾ ಹಿರೇಮಠ ಹಾಗೂ ಸೌಜನ್ಯ ಬಳಿಗೇರ, ಬೆಳಹೋಡದಲ್ಲಿ ವಿದ್ಯಾ ಹೊಸಳ್ಳಿ, ವೀಣಾ ಹೊಸಳ್ಳಿ, ಸಹನಾ ಮಾಳವಾಡ, ಸಂಜನಾ ಸಂಕನಗೌಡ್ರ ಹಾಗೂ ಕಲ್ಮೇಶ ಕಾಲವಾಡ ಅವರನ್ನು ಗೌರವಿಸಲಾಯಿತು.

**ವಿದ್ಯಾರ್ಥಿಗಳು ಕಷ್ಟಪಟ್ಟು ಅಲ್ಲ, ಇಷ್ಟಪಟ್ಟು ಓದಬೇಕು. ಜ್ಞಾನವನ್ನು ಬದುಕಿನ ಬಂಡವಾಳವನ್ನಾಗಿ ಮಾಡಿಕೊಂಡರೆ ಯಶಸ್ಸು ನಿಮ್ಮನ್ನು ಹುಡುಕಿಕೊಂಡು ಬರುತ್ತದೆ.**

**– ಶಿವಾನಂದ ಕಟ್ಟಿ,** ಹಿರಿಯ ಟ್ರಸ್ಟಿ, ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ

ಕಾರ್ಯಕ್ರಮಗಳಲ್ಲಿ ಪ್ರತಿಷ್ಠಾನದ ಕಾರ್ಯದರ್ಶಿ ಸುಭಾಷ್ಚಂದ್ರ ಬೆಟ್ಟದೂರ, ಗುರುರಾಜ ಅಣ್ಣಿಗೇರಿ, ಸ್ನೇಹಾ ಖಟವಟೆ, ಮಮತಾಜ್, ಪ್ರಸನ್, ವಿವಿಧ ಶಾಲೆಗಳ ಮುಖ್ಯೋಪಾಧ್ಯಾಯರು, ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಸಹಕಾರ, ಸಮಾನತೆ, ದಾಸೋಹವೇ ಶಿವಶರಣರ ಅಮೂಲ್ಯ ಕೊಡುಗೆ: ಡಾ. ಸಿದ್ಧರಾಮ ಶ್ರೀ

# ವಚನದಲ್ಲಿದೆ ವಿಶ್ವಶಾಂತಿಯ ಮಾರ್ಗ



**ವಿಜಯಸಾಕ್ಷಿ ಸುದ್ದಿ, ಗದಗ**

ಜಗತ್ತಿನ ಪ್ರತಿಯೊಂದು ಸಮಸ್ಯೆಗೆ ವಚನಸಾಹಿತ್ಯದಲ್ಲಿಯೇ ಪರಿಹಾರ ಅಡಗಿದ್ದು, ಬಸವಾದಿ ಶಿವಶರಣರ ಕಾಯಕ, ಸಮಾನತೆ ಮತ್ತು ದಾಸೋಹ ತತ್ವಗಳು ವಿಶ್ವಶಾಂತಿಯ ದಾರಿದೀಪವಾಗಿವೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ನಗರದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘ ಆಯೋಜಿಸಿದ್ದ 2805ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಬಸವಾದಿ ಶಿವಶರಣರ ವಚನಗಳು ಜಾತಿ, ಮತ, ಪಂಥ, ಮೌಢ್ಯತೆ ಹಾಗೂ ಭೇದಭಾವಗಳನ್ನು ತೊಡೆದುಹಾಕಿ ಮಾನವಕುಲ ಒಂದೇ ಎಂಬ ಸಂದೇಶ ಸಾರುತ್ತವೆ. ಸಹಕಾರ, ಸಹಬಾಳ್ವೆ ಮತ್ತು ಶಾಂತಿಯ ಬದುಕಿಗೆ ವಚನಗಳು ಇಂದಿಗೂ ಪ್ರಸ್ತುತವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಕೆಸಿಸಿ ಬ್ಯಾಂಕ್‌ನ ನಿವೃತ್ತ ಅಧಿಕಾರಿಗಳಾದ ಎಸ್.ವಿ. ಪಾಟೀಲ (ಮುಂಡರಗಿ) ಅವರು, ಸಹಕಾರ ಚಳುವಳಿಯ ವಿಶ್ವಮಟ್ಟದ ಬೆಳವಣಿಗೆ, ಭಾರತದಲ್ಲಿ ಅದರ ವಿಸ್ತರಣೆ ಹಾಗೂ ಕರ್ನಾಟಕದ ಇಂದಿನ ಸಹಕಾರ ಕ್ಷೇತ್ರದ ಸ್ಥಿತಿಗತಿಗಳ ಕುರಿತು ವಿವರಿಸಿದರು.

ಗೌರವ ಸನ್ಮಾನ ಸ್ವೀಕರಿಸಿ ಮಾತನಾಡಿದ ಶಿವಸಂಗಮ ಗ್ರೂಪ್ ಸಂಸ್ಥಾಪಕ ಅಧ್ಯಕ್ಷ ಜಿ.ಎಂ. ಪಲ್ಲೇದ, ಸಹಕಾರ ಎನ್ನುವುದು ಸಮಾಜಕ್ಕಷ್ಟೇ ಅಲ್ಲ, ಮಾನವ ದೇಹದ ಪ್ರತಿಯೊಂದು ಅಂಗದ ಕಾರ್ಯನಿರ್ವಹಣೆಯಲ್ಲೂ ಅಡಗಿದೆ. ಪರಸ್ಪರ ಸಹಕಾರವಿಲ್ಲದಿದ್ದರೆ ಯಾವುದೇ ವ್ಯವಸ್ಥೆ ಸುಗಮವಾಗಿ ಸಾಗುವುದಿಲ್ಲ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ ಮಾಜಿ ಅಧ್ಯಕ್ಷ ಕೆ.ಎಸ್. ಚೆಟ್ಟಿ ಅವರನ್ನು ಸನ್ಮಾನಿಸಲಾಯಿತು. ಚಾರ್ಟರ್ಡ್ ಅಕೌಂಟೆಂಟ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಸಾಧನೆಗೈದ ಸ್ವಾತಿ ಕರಮುಡಿ, ವಿರೂಪಾಕ್ಷಪ್ಪ ನವಲಗುಂದ, ಪೂಜಾ ಗುಗ್ಗರಿ ಹಾಗೂ ರೋಹನ್ ಜೋಗಿನ ಅವರನ್ನು ಪ್ರತಿಭಾ ಸನ್ಮಾನ ಮಾಡಿ ಗೌರವಿಸಲಾಯಿತು.

> **ಬಸವಾದಿ ಶಿವಶರಣರ ವಚನಗಳು ಮಾನವೀಯ ಮೌಲ್ಯಗಳನ್ನು ಬಲಪಡಿಸಿ, ಶಾಂತಿ ಮತ್ತು ಸಹಬಾಳ್ವೆಯ ಸಮಾಜ ನಿರ್ಮಾಣಕ್ಕೆ ದಾರಿದೀಪವಾಗಿವೆ.**
> **- ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು**

ಕಾರ್ಯಕ್ರಮದಲ್ಲಿ ವಚನ ಸಂಗೀತವನ್ನು ಸಾಯಿಪ್ರಸಾದ ಬಡಿಗೇರ ಹಾಗೂ ಗುರುನಾಥ ಸುತಾರ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಖುಷಿ ಕಟ್ಟೆಕಾರ, ವಚನ ಚಿಂತನವನ್ನು ಕೋಮಲ ಮುಗಳಿ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಡಾ. ಮಲ್ಲಿಕಾರ್ಜುನ ಪಟ್ಟಣಶೆಟ್ಟಿ ಕುಟುಂಬ ಹಾಗೂ ಕೊಟ್ರೇಶ ದಾನಪ್ಪ ಮೆಣಸಿನಕಾಯಿ ಕುಟುಂಬ ವಹಿಸಿಕೊಂಡಿದ್ದರು.

ಸಂಘದ ಅಧ್ಯಕ್ಷ ಡಾ. ಉಮೇಶ ಪುರದ, ಶಿವಾನುಭವ ಸಮಿತಿ ಅಧ್ಯಕ್ಷ ರಮೇಶ ಕಲ್ಲನಗೌಡರ, ಉಪಾಧ್ಯಕ್ಷ ಪ್ರಭು ಗಂಜಿಹಾಳ, ಸುರೇಖಾ ಪಿಳ್ಳಿ, ಸಿದ್ಧರಾಮ ಪಟ್ಟೇದ, ಪ್ರತಿಭಾ ಬಡ್ನಿ, ವೀರಣ್ಣ ಗೋಟಡಕಿ, ಕೆ.ಎಸ್. ಕೋರಿಮಠ, ಸೋಮಶೇಖರ ಪುರಾಣಿಮಠ, ಆದೇಶ ಅಂಗಡಿ ಸೇರಿದಂತೆ ಸಂಘದ ಪದಾಧಿಕಾರಿಗಳು, ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

# ಎಸ್‌ಐಆರ್: ಶೇ. 82ರಷ್ಟು ಗಣತಿ ನಮೂನೆ ವಿತರಣೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್2026) ಕಾರ್ಯ ಧಾರವಾಡ ಜಿಲ್ಲೆಯಲ್ಲಿ ವೇಗ ಪಡೆದಿದ್ದು, ಜುಲೈ 9ರ ವೇಳೆಗೆ ಶೇ. 82.01ರಷ್ಟು ಗಣತಿ (ಎನ್ಯುಮರೇಷನ್) ನಮೂನೆಗಳನ್ನು ಮತದಾರರಿಗೆ ವಿತರಿಸಲಾಗಿದೆ.

ಜಿಲ್ಲೆಯ 16,21,961 ಮತದಾರರ ಪೈಕಿ 13,30,159 ನಮೂನೆಗಳು ವಿತರಣೆಗೊಂಡಿದ್ದು, 1,02,226 ನಮೂನೆಗಳು ಡಿಜಿಟಲೀಕರಣ ಆಗಿವೆ. ಮನೆ-ಮನೆ ಭೇಟಿ ವೇಳೆ 1,966 ಪ್ರಕರಣಗಳು ಪತ್ತೆಯಾಗಿದ್ದು, ಅವುಗಳಲ್ಲಿ 1,272 ಮರಣ, 262 ಶಾಶ್ವತ ವಲಸೆ, 400 ದ್ವಿಪ್ರತಿ, 24 ಗೈರು ಹಾಗೂ 8 ಇತರೆ ಪ್ರಕರಣಗಳು ಸೇರಿವೆ.

ಮತಗಟ್ಟೆ ಮಟ್ಟದ ಅಧಿಕಾರಿಗಳು ಜುಲೈ 29ರವರೆಗೆ ಮನೆ-ಮನೆಗೆ ಭೇಟಿ ನೀಡಿ ನಮೂನೆ ವಿತರಣೆ ಮುಂದುವರಿಸಲಿದ್ದು, ಸಾರ್ವಜನಿಕರು ಭರ್ತಿ ಮಾಡಿದ ನಮೂನೆಗಳನ್ನು ಬಿಎಲ್‌ಒಗಳಿಗೆ ಸಲ್ಲಿಸಿ ಸಹಕರಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸ್ನೇಹಲ್ ಆರ್. ಮನವಿ ಮಾಡಿದ್ದಾರೆ.



# ಯೋಗಿ ನಾರಾಯಣ ದೇವಸ್ಥಾನದಲ್ಲಿ ವಿಶೇಷ ಪೂಜೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಹೊಂಬಳ ಗ್ರಾಮದ ಶ್ರೀ ಯೋಗಿ ನಾರಾಯಣ, ಶ್ರೀ ಲಕ್ಷ್ಮೀ ಹಾಗೂ ಈಶ್ವರ ದೇವಸ್ಥಾನದಲ್ಲಿ ಬುಧವಾರ ವಿಶೇಷ ಅಭಿಷೇಕ, ವೇದಘೋಷ ಹಾಗೂ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ಭಕ್ತಿಭಾವದಿಂದ ನೆರವೇರಿದವು.

ಅರ್ಚಕರಾದ ಮಾದೇಶ ಆಚಾರ್ಯ, ಗೋಪಾಲಕೃಷ್ಣ ಆಚಾರ್ಯ, ವಿಷ್ಣು ಹಾಗೂ ರಘು ಅವರ ನೇತೃತ್ವದಲ್ಲಿ ಪೂಜಾ ವಿಧಿವಿಧಾನಗಳು ನಡೆದವು. ಈ ವೇಳೆ ಮುತ್ತೈದೆಯರಿಂದ ಭಜನೆ ಹಾಗೂ ಸಂಗೀತ ಸೇವೆ ಜರುಗಿ ಧಾರ್ಮಿಕ ವಾತಾವರಣ ನಿರ್ಮಾಣವಾಯಿತು.

ಕಾರ್ಯಕ್ರಮದಲ್ಲಿ ಹೊಂಬಳ ಗ್ರಾಮದ ಬ್ರಾಹ್ಮಣ ಸಂಘದ ಅಧ್ಯಕ್ಷ ಶ್ರೀಪಾದ ಬದಾಮಿ, ಶ್ರೀ ಉಗ್ರದ, ಶಲವಡಿ ಸೇರಿದಂತೆ ವಿವಿಧ ಸಮುದಾಯಗಳ ಮುಖಂಡರು, ಹಿರಿಯರು ಹಾಗೂ ಭಕ್ತರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ ಕೈಗೊಳ್ಳುವ ಬಗ್ಗೆ ಗ್ರಾಮಸ್ಥರು ಸರ್ವಾನುಮತದಿಂದ ನಿರ್ಧಾರ ಕೈಗೊಂಡರು.

ಮುಳಗುಂದ ಬ್ರಾಹ್ಮಣ ಸಂಘದ ಅಧ್ಯಕ್ಷ ಶ್ರೀಪಾದನಾಯಕ ಶಂ. ತಮ್ಮಣ್ಣವರ (ಚಿನಿವಾಲರ) ಮಾತನಾಡಿ, ಗ್ರಾಮದ ಎಲ್ಲ ಭಕ್ತರು ತನು-ಮನ-ಧನದಿಂದ ಸಹಕಾರ ನೀಡಿ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ ಯಶಸ್ವಿಗೊಳಿಸಬೇಕು.

ಶ್ರೀ ಯೋಗಿ ನಾರಾಯಣ ಸ್ವಾಮಿಯವರ ಆಶೀರ್ವಾದದಿಂದ ಈ ಕಾರ್ಯ ಶೀಘ್ರ ಪೂರ್ಣಗೊಳ್ಳಲಿ ಎಂದು ಹಾರೈಸಿದರು.



### ಒಬ್ಬ ರೋಟೇರಿಯನ್ ಒಂದು ಮರ ಸಂಕಲ್ಪ; ವೃಕ್ಷಾರೋಪಣಕ್ಕೆ ಸಾರ್ವಜನಿಕರಿಗೂ ಆಹ್ವಾನ

# ಜು. 12ರಿಂದ ಜಿಲ್ಲಾದ್ಯಂತ ಹಸಿರು ಅಭಿಯಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಸರ ಸಂರಕ್ಷಣೆ ಹಾಗೂ ಮುಂದಿನ ಪೀಳಿಗೆಗೆ ಹಸಿರು ಪರಂಪರೆಯನ್ನು ಉಳಿಸುವ ಉದ್ದೇಶದಿಂದ ರೋಟರಿ ಜಿಲ್ಲಾ 3170 ವತಿಯಿಂದ ಜುಲೈ 12ರಿಂದ 19ರವರೆಗೆ ಜಿಲ್ಲಾದ್ಯಂತ ಬೃಹತ್ ವೃಕ್ಷಾರೋಪಣ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ತಿಳಿಸಿದರು.

ನಗರದ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ತೋಟಗಾರಿಕೆ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ನಡೆದ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇದು ಕೇವಲ ಗಿಡ ನೆಡುವ ಕಾರ್ಯಕ್ರಮವಲ್ಲ; ಪರಿಸರ ಸಂರಕ್ಷಣೆಯನ್ನು ಜನಾಂದೋಲನವಾಗಿಸುವ ಹಾಗೂ ಮುಂದಿನ ಪೀಳಿಗೆಗೆ ಹಸಿರು ಪರಂಪರೆಯನ್ನು ಉಳಿಸುವ ಮಹತ್ವದ ಅಭಿಯಾನವಾಗಿದೆ ಎಂದರು.

ಒಬ್ಬ ರೋಟೇರಿಯನ್ ಒಂದು ಮರ ಒಂದು ಶಾಶ್ವತ ಪರಂಪರೆ ಎಂಬ ಧ್ಯೇಯದಡಿ ಪ್ರತಿಯೊಬ್ಬ ರೋಟೇರಿಯನ್ ಕನಿಷ್ಠ ಒಂದು ಗಿಡ ನೆಟ್ಟು ಅದರ ಸಂರಕ್ಷಣೆಯ ಹೊಣೆ ಹೊರುವ ಸಂಕಲ್ಪ ಕೈಗೊಂಡಿದ್ದಾರೆ. ಸ್ಥಳೀಯ ಪರಿಸರಕ್ಕೆ ಹೊಂದುವ ದೇಶೀ ಜಾತಿಯ ಸಸಿಗಳಿಗೆ ಆದ್ಯತೆ ನೀಡಲಾಗಿದ್ದು,




ಶಾಲೆಗಳು, ಸರ್ಕಾರಿ ಕಚೇರಿಗಳು, ಸಾರ್ವಜನಿಕ ಸ್ಥಳಗಳು, ಉದ್ಯಾನವನಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ವೃಕ್ಷಾರೋಪಣ ನಡೆಯಲಿದೆ ಎಂದು ಹೇಳಿದರು.

ಗಿಡ ನೆಡುವುದರ ಜೊತೆಗೆ ಅವುಗಳ ಸಂರಕ್ಷಣೆಗೆ ವಿಶೇಷ ಆದ್ಯತೆ ನೀಡಲಾಗಿದ್ದು, ನಿಯಮಿತವಾಗಿ ನೀರುಣಿಸುವುದು, ಬೇಲಿ ಅಳವಡಿಸುವುದು ಹಾಗೂ ನಿರಂತರ ಮೇಲ್ವಿಚಾರಣೆ ನಡೆಸಲಾಗುವುದು. ಪರಿಸರ ಸಂರಕ್ಷಣೆಗಾಗಿ ಜಿಲ್ಲೆಯ ಪ್ರತಿಯೊಬ್ಬ ನಾಗರಿಕರೂ ಈ ಅಭಿಯಾನದಲ್ಲಿ ಕೈಜೋಡಿಸುವಂತೆ ಅವರು ಮನವಿ ಮಾಡಿದರು.

> **ಗಿಡ ನೆಡುವುದಷ್ಟೇ ಸಾಲದು; ಅದನ್ನು ಮರವಾಗಿ ಬೆಳೆಸುವ ಹೊಣೆಗಾರಿಕೆಯೇ ನಿಜವಾದ ಪರಿಸರ ಸೇವೆ.**
> **- ಡಾ. ಪ್ರದೀಪ ಉಗಲಾಟ**

ಅಭಿಯಾನದಲ್ಲಿ ರೋಟರಾಕ್ಟ್ ಹಾಗೂ ಇಂಟರಾಕ್ಟ್ ಸದಸ್ಯರು, ವಿದ್ಯಾರ್ಥಿಗಳು, ಶಿಕ್ಷಕರು, ವಿವಿಧ ಸರ್ಕಾರಿ ಇಲಾಖೆಗಳು, ಸ್ವಯಂಸೇವಾ ಸಂಸ್ಥೆಗಳು ಹಾಗೂ ಪರಿಸರ ಪ್ರೇಮಿಗಳು ಸಕ್ರಿಯವಾಗಿ ಪಾಲ್ಗೊಳ್ಳಲಿದ್ದು, ಜೀವ ವೈವಿಧ್ಯತೆ ವೃದ್ಧಿ ಮತ್ತು ಹಸಿರು ಪರಿಸರ ನಿರ್ಮಾಣಕ್ಕೆ ಒತ್ತು ನೀಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಶೈಲೇಂದ್ರ ಬಿರಾದಾರ, ಸಹಾಯಕ ತೋಟಗಾರಿಕೆ ಅಧಿಕಾರಿಗಳಾದ ಡಾ. ಆನಂದ ನರಸಣ್ಣವರ, ಎಸ್.ಪಿ. ಹಿರೇಮಠ, ಷಣ್ಮುಖಪ್ಪ ಕವಲೂರ ಉಪಸ್ಥಿತರಿದ್ದರು. ಸುರೇಶ ಕುಂಬಾರ ಉಪನ್ಯಾಸ ನೀಡಿದರು. ಕ್ಲಬ್ ಕಾರ್ಯದರ್ಶಿ ಅಕ್ಷಯ್ ಶೆಟ್ಟಿ ಸ್ವಾಗತಿಸಿ ವಂದಿಸಿದರು.

# ಬಾಕಿ ಉಳಿದ ಅಬಕಾರಿ ಸನ್ನದುಗಳ ಇ-ಹರಾಜು

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಅಬಕಾರಿ ಇಲಾಖೆಯಲ್ಲಿ ಮಂಜೂರಾಗದೇ ಬಾಕಿ ಉಳಿದಿರುವ ಸನ್ನದುಗಳನ್ನು ಇ-ಹರಾಜು ಮೂಲಕ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಧಾರವಾಡ ಜಿಲ್ಲೆಯಲ್ಲಿ 15 ಸಿಎಲ್-2ಎ ಹಾಗೂ 4 ಸಿಎಲ್-9ಎ ಸನ್ನದುಗಳು ಇ-ಹರಾಜಿಗೆ ಒಳಪಡಲಿವೆ. ಬಿಡ್ಡುದಾರರಿಗೆ ಜುಲೈ 13ರಂದು ಬೆಳಿಗ್ಗೆ 11 ಗಂಟೆಗೆ ಕುಲಪುರೋಹಿತ ಆಲೂರ ವೆಂಕಟರಾವ್ ಸಾಂಸ್ಕೃತಿಕ ಸಭಾಭವನದಲ್ಲಿ ತರಬೇತಿ ಆಯೋಜಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರದ ಸ್ವಾಯುತ್ತ ಸಂಸ್ಥೆ
**ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ**
ಹಿಂದಿನ ಹೆಸರು ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ
ಮುಳಗುಂದ ರಸ್ತೆ, ಮಲ್ಲಸಮುದ್ರ, ಗದಗ-582103 ದೂರವಾಣಿ ಸಂಖ್ಯೆ: 08372-200601
E-mail ID: gimsgadag@gmail.com web: www. gimsgadag. karnataka.gov.in
File No : KHPIMS/Tender/Cost Per Test/65/2026-27/ 60 Date : 09.07.2026
**ಇ-ಟೆಂಡರ್ ಪ್ರಕಟಣೆ**
ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜೀವ ರಸಾಯನಶಾಸ್ತ್ರ ವಿಭಾಗಕ್ಕೆ **ABG Analyser Reagents Cost Per Reportable Test Reagent Rental Basis** ಮುಖಾಂತರ ವೈದ್ಯಕೀಯ ಪ್ರಯೋಗ ಶಾಲಾ ಪರೀಕ್ಷೆಗಳಿಗಾಗಿ ಬಾಡಿಗೆ ಆದಾರದ ಮೇಲೆ ಸರಬರಾಜುವಿಗಾಗಿ ಕರೆದ ಟೆಂಡರ್ ಆಸಕ್ತಿಯುಳ್ಳ ಸಂಘ-ಸಂಸ್ಥೆಗಳಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಕರೆಯಲಾಗಿದ್ದು, **ದಿನಾಂಕ: 10-07-2026** ರಿಂದ **ದಿನಾಂಕ: 27-07-2026ರ ಸಾಯಂಕಾಲ 4:00 ಗಂಟೆವರೆಗೆ** ಇ-ಪೋರ್ಟಲ್ ಸಂಖ್ಯೆ: **DME/2026-27/IND2474 (https://kppp.Karnataka.gov.in/)**ನಲ್ಲಿ ಟೆಂಡರ್ ಅಪ್‌ಲೋಡ್ ಮಾಡಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಕರ್ತವ್ಯದ ದಿನಗಳಲ್ಲಿ ಕೆಳಗಡೆ ಸಹಿ ಮಾಡಿದವರ ಕಚೇರಿಗೆ ಸಂಪರ್ಕಿಸಬಹುದು.
ಸಹಿ/- ನಿರ್ದೇಶಕರು,
ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ
ಡಿಐಪಿಆರ್/ಗದಗ/154/ಮಣಿಪಾಲ್/2026-27

# ಅಣ್ಣಿಗೇರಿ ಗುರುಗಳ ಆದರ್ಶ ಮಕ್ಕಳಿಗೆ ದಾರಿದೀಪ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಗ್ರಾಮೀಣ ಮಕ್ಕಳ ಶಿಕ್ಷಣ ಮತ್ತು ಭವಿಷ್ಯಕ್ಕಾಗಿ ತಮ್ಮ ಇಡೀ ಜೀವನವನ್ನೇ ಮುಡಿಪಾಗಿಟ್ಟ ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳು ಇಂದಿನ ಪೀಳಿಗೆಗೆ ಆದರ್ಶಪ್ರಾಯ ವ್ಯಕ್ತಿತ್ವ ಎಂದು ರವಿ ದಂಡಿನ ಹೇಳಿದರು.

ಪಟ್ಟಣದ ಸರ್ಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಯಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ, ಗದಗ ವತಿಯಿಂದ ಆಯೋಜಿಸಿದ್ದ 12ನೇ ವರ್ಷದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು.

ಅಣ್ಣಿಗೇರಿ ಗುರುಗಳು ಗ್ರಾಮೀಣ ಭಾಗದ ಸಾವಿರಾರು ಮಕ್ಕಳಿಗೆ ಉಚಿತ ಶಿಕ್ಷಣ ಹಾಗೂ ವಸತಿ ವ್ಯವಸ್ಥೆ ಕಲ್ಪಿಸಿ ಅವರ ಬದುಕಿಗೆ ಬೆಳಕಾದ ಮಹಾನ್ ಶಿಕ್ಷಕರಾಗಿದ್ದರು.

ಅವರ ಸೇವೆಯನ್ನು ಚಿರಸ್ಥಾಯಿಯಾಗಿಸುವ ಉದ್ದೇಶದಿಂದ ಪ್ರತಿಷ್ಠಾನ ಕಳೆದ 12 ವರ್ಷಗಳಿಂದ ಸರ್ಕಾರಿ ಶಾಲೆಗಳ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸುತ್ತಿರುವುದು ಶ್ಲಾಘನೀಯ ಕಾರ್ಯ ಎಂದರು.



ಶಾಲೆಯ ಪ್ರಧಾನಗುರು ಎಸ್.ಎಚ್. ಪೂಜಾರ ಮಾತನಾಡಿ, ಬಿ.ಜಿ. ಅಣ್ಣಿಗೇರಿ ಗುರುಗಳು ತಮ್ಮ ಬದುಕನ್ನೇ ಮಕ್ಕಳ ಶಿಕ್ಷಣಕ್ಕಾಗಿ ಸಮರ್ಪಿಸಿಕೊಂಡ ಮಹನೀಯರು. ವಿದ್ಯಾರ್ಥಿಗಳು ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಶ್ರದ್ಧೆಯಿಂದ ಅಧ್ಯಯನ ಮಾಡಿದರೆ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂತೋಷ ವಡ್ಡರ, ಸುಮಾ ಹರ್ತಿ, ಶಾಂಭವಿ ಸುಂಕಾಪೂರ, ಪ್ರದೀಪ ಗೌಡನಾಯ್ಕರ ಹಾಗೂ ಶ್ವೇತಾ ಹಾಸಲಕರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂ.ಎಚ್. ಮಾನೇಗಾರ ವಹಿಸಿದ್ದರು. ಬಿ.ಕೆ. ಬೆಳ್ಳೇರಿಮಠ, ವೆಂಕಟೇಶ ವೀರಲಿಂಗಯ್ಯಮಠ, ಶಿವಾನಂದ ಕಟ್ಟಿ, ಸ್ನೇಹಾ ಖಟವಟೆ, ಬಸಮ್ಮ, ಗುಳಪ್ಪ ಮಜ್ಜಿಗುಡ್ಡ, ಮಹಾಂತೇಶ ಕೆಂಚನಾಯ್ಕರ, ಉಮೇಶ ಸುಂಕಾಪೂರ, ನೂರಹ್ಮದ್ ನದಾಫ್, ವಿ.ಟಿ. ಅಂಗಡಿ, ಬಸವರಾಜ ಗೌರಿಮನಿ, ಮಂಜುನಾಥ ಕಲ್ಯಾಣಮಠ, ಎಸ್.ವಿ. ತಿಮ್ಮಾಪೂರ, ಗೀತಾ ಕುಂದರಗಿ, ಕವಿತಾ ಹಳ್ಳದ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಡೆಂಗಿ ನಿಯಂತ್ರಣ ನಮ್ಮ ಕೈಯಲ್ಲೇ ಇದೆ: ಡಾ. ಪ್ರೀತ್ ಖೋನಾ

**ವಿಜಯಸಾಕ್ಷಿ ಸುದ್ದಿ, ಗದಗ**

ಡೆಂಗಿ ಕಾಯಿಲೆ ಹರಡುವ ಇಡಿಸ್ ಸೊಳ್ಳೆ ಮನೆಯ ಸುತ್ತಮುತ್ತಲಿನ ನಿಂತ ನೀರಿನಲ್ಲಿ ಬೆಳೆಯುವುದರಿಂದ ಸಾರ್ವಜನಿಕರು ಪರಿಸರ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ನೀರಿನ ಸಂಗ್ರಹಗಳನ್ನು ಭದ್ರವಾಗಿ ಮುಚ್ಚಿಡುವ ಮೂಲಕ ಡೆಂಗಿ ನಿಯಂತ್ರಣ ಸಾಧ್ಯ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ ಹೇಳಿದರು.

ನಗರದ ಸರ್ಕಾರಿ ಉರ್ದು ಪ್ರೌಢಶಾಲೆಯಲ್ಲಿ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಹಾಗೂ ನಗರ ಆರೋಗ್ಯ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಡೆಂಗಿ ವಿರೋಧಿ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.




ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್. ಗಡಾದ ಮಾತನಾಡಿ, ತೀವ್ರ ಜ್ವರ, ಮೈ-ಕೈ ನೋವು, ಕೀಲು ನೋವು, ಕಣ್ಣಿನ ಹಿಂಭಾಗದಲ್ಲಿ ನೋವು, ಚರ್ಮದ ಮೇಲೆ ಕೆಂಪು ಕಲೆಗಳು, ಬಾಯಿ ಹಾಗೂ ಮೂಗಿನಿಂದ ರಕ್ತಸ್ರಾವದಂತಹ ಲಕ್ಷಣಗಳು ಕಂಡುಬಂದರೆ ತಕ್ಷಣ ಸರ್ಕಾರಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು. ನೀರಿನ ಟ್ಯಾಂಕ್, ಡ್ರಮ್, ಬ್ಯಾರೆಲ್, ಕೂರ್ಲ, ಹೂವಿನ ಕುಂಡ ಸೇರಿದಂತೆ ನೀರು ನಿಲ್ಲುವ ಎಲ್ಲ ಪಾತ್ರೆಗಳನ್ನು ವಾರಕ್ಕೊಮ್ಮೆ ಖಾಲಿ ಮಾಡಿ ಸ್ವಚ್ಛಗೊಳಿಸುವಂತೆ ಸಲಹೆ ನೀಡಿದರು.

ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ ಕೊಪ್ಪಳ ಮಾತನಾಡಿ, ಮನೆಯ ಸುತ್ತಮುತ್ತ ಮಳೆಯ ನೀರು ನಿಲ್ಲುವ ಪ್ಲಾಸ್ಟಿಕ್ ಪಾತ್ರೆಗಳು, ಹಳೆಯ ಟೈರ್‌ಗಳು, ತೆಂಗಿನ ಚಿಪ್ಪು ಸೇರಿದಂತೆ ಸೊಳ್ಳೆ ಉತ್ಪತ್ತಿಗೆ ಕಾರಣವಾಗುವ ವಸ್ತುಗಳನ್ನು ತಕ್ಷಣ ವಿಲೇವಾರಿ ಮಾಡಬೇಕು ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಶಿಕ್ಷಣ ಪ್ರೇಮಿ ಉಮರ್ ಫಾರುಖ್ (ಹುಬ್ಬಳ್ಳಿ) ಭಾಗವಹಿಸಿ, ಆರೋಗ್ಯ ಇಲಾಖೆಯ ಯೋಜನೆಗಳ ಸದುಪಯೋಗ ಪಡೆಯುವಂತೆ ಕರೆ ನೀಡಿದರು. ಶಾಲೆಯ ಮುಖ್ಯೋಪಾಧ್ಯಾಯೆ ಲಲಿತಾ ವನಕಿಹಾಳ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆ ಶ್ರೀಮತಿ ಹಿರೇಮಠ, ಎಚ್‌ಐಒ ಸಹಜಾನಂದ ಸಾಸವೆಹಳ್ಳಿ, ಚೇತನ್ ಕರ್ಣಿ, ಶ್ರೀಮತಿ ಅಂಬಿಗೇರ, ಶಿಕ್ಷಕರು, ಶಾಲಾ ಮಕ್ಕಳು, ಪಾಲಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka